ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 177 RNI Number : KNKAN/25/A2770 06-07-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :177 ರಾಯಚೂರು 06-07-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಸಿಸಿ ರಸ್ತೆ – ದೇವಸ್ಥಾನ ನಿರ್ಮಾಣಕ್ಕೆ ಮಾಜಿ ಸಚಿವರು – ಹಾಲಿ ಶಾಸಕರಿಂದ ಪೂಜೆ

ಭಕ್ತರ ಅನುಕೂಲವಾಗುವಂತೆ ಗುಣಮಟ್ಟದ ಕಾಮಗಾರಿಯಾಗಬೇಕು



ಸಿರವಾರ.ಜು.5–

ಬೀರಲಿಂಗೇಶ್ವರ ಭಕ್ತರ ದೇವಸ್ಥಾನಕ್ಕೆ ಹೋಗುವ ರಸ್ತೆ, ಕ್ಯಾಂಪಿನಲ್ಲಿ ಆಂಜನೇಯ್ಯ ದೇವಸ್ಥಾನ ನಿರ್ಮಿಸುವಂತೆ ಅನೇಕ ವರ್ಷದ ಬೇಡಿಕೆಯನ್ನು ಈಡೆರಿಸಿದ್ದೆವೆ ಎಂದು ಮಾಜಿ ಸಚಿವರಾದ ಎನ್ ಎಸ್ ಬೋಸರಾಜು ಹೇಳಿದರು. ತಾಲೂಕಿನ ಮಾಡಗಿರಿ ಗ್ರಾಮಪಂಚಾಯತಿ ವ್ಯಾಪ್ತಿಯ ಹಳ್ಳಿ ಹೊಸೂರಿನ ಬಸ್ ನಿಲ್ದಾಣ ದಿಂದ ಹಳಿ ಆಂಜನೇಯ ದೇವಸ್ಥಾನ ವರೆಗೆ 50 ಲಕ್ಷ ವೆಚ್ಚದಲ್ಲಿ ಸಿ.ಸಿ ರಸ್ತೆ ನಿರ್ಮಾಣ(2025–26 ನೇ ಸಾಲಿನ ಯೋಜನೆ, ಅನುಷ್ಠಾನ ಇಲಾಖೆ:), ಹಳ್ಳಿ ಹೊಸೂರು ಕ್ಯಾಂಪ್ (ಬಾಜಿ ರೆಡ್ಡಿ) ನಲ್ಲಿ 10 ಲಕ್ಷ ವೆಚ್ಚದಲ್ಲಿ ಶ್ರೀ ಆಂಜನೇಯ ದೇವಸ್ಥಾನ ಅಭಿವೃದ್ಧಿ (2025–26 ನೇ ಸಾಲಿನ ಯೋಜನೆ, ಅನುಷ್ಠಾನ ಇಲಾಖೆ:) ಶಾಸಕರಾದ ಜಿ.ಹಂಪಯ್ಯನಾಯಕರೊಂದಿಗೆ ಚಾಲನೆ ನೀಡಿ ಮಾತನಾಡಿದ ಅವರು ಈ ಎರಡು ಬೇಡಿಕೆಗಳು ಅನೇಕ ವರ್ಷದಿಂದ ಹೇಳುತ್ತಿದರು. ಅದು ಈಡೆರಿದೆ. ಉತ್ತಮ ಗುಣ ಮಟ್ಟದ ಕಾಮಗಾರಿಯಾಗಬೇಕು ಎಂದರು. ಮಾನ್ವಿ ಶಾಸಕರಾದ ಜಿ.ಹಂ ಪಯ್ಯನಾಯಕ ಮಾತನಾಡಿ ಹಳ್ಳಿ– ಹೊಸೂರು ಸಂಪರ್ಕ ಕಲ್ಪಿಸುವ ಹಳ್ಳದ ಸೇತುವೆ ನಿರ್ಮಿಸುವ ಮೂಲಕ ರಾಯಚೂರಿಗೆ ಹೋಗಲು, ಜಮೀನುಗಳಿಗೆ ಹೋಗಲು ಅನುಕೂಲ ಮಾಡಿದ್ದೆವೆ. ಮುಂದಿನ ದಿನಗಳಲ್ಲಿ ಇನೂ ಹೆಚ್ಚಿನ ಅಭಿವೃದ್ದಿ ಕಾಮಗಾರಿ ಮಾಡಲಾಗುವುದು ಎಂದರು.

ಬ್ರಿಜೇಶ್ ಪಾಟೀಲ್,

3ನೇಯ ಪುಟಕ್ಕೆ

ಬಾಲಕಾರ್ಮಿಕ ನಿರ್ಮೂಲನೆಗೆ ದಿಟ್ಟ ಹೆಜ್ಜೆ; ಜಾಗೃತಿ ಪೋಸ್ಟರ್ ಬಿಡುಗಡೆ –ಶಿವಾನಂದ ಭಜಂತ್ರಿ



ರಾಯಚೂರು,ಜು.5–

ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ರಾಷ್ಟ್ರೀಯ ಬಾಲಕಾರ್ಮಿಕ ಯೋಜನೆ ಹಾಗೂ ವಿವಿಧ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿ ಮುಕ್ತ ದೇಶಕ್ಕಾಗಿ ಒಂದು ದಿಟ್ಟ ಹೆಜ್ಜೆ ಎಂಬ ಧೇಯ ವಾಕ್ಯದೊಂದಿಗೆ ಜಾಗೃತಿ ಅಭಿಯಾನಕ್ಕೆ ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅವರು ಬಾಲಕಾರ್ಮಿಕ ಪದ್ಧತಿ ವಿರೋಧಿ ಜಾಗೃತಿ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಿ, ಬಾಲಕಾರ್ಮಿಕರನ್ನು ಗುರುತಿಸಿದರೆ ಉಚಿತ ಸಹಾಯವಾಣಿ ಮೂಲಕ ಮಾಹಿತಿ ನೀಡಿ ಸಮಾಜದ ಪ್ರತಿಯೊಬ್ಬರೂ ನಿರ್ಮೂಲನೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಬಳಿಕ ಇಲಾಖೆಯ ಪ್ರಚಾರ ವಾಹನದ ಮೂಲಕ ನಗರದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಗಂಜ್ ಪ್ರದೇಶ, ಮಾರ್ಕೆಟ್ ರಸ್ತೆ ಸೇರಿದಂತೆ ಪ್ರಮುಖ ಜನನಿಬಿಡ ಪ್ರದೇಶಗಳಲ್ಲಿ ಧ್ವನಿವರ್ಧಕದ ಮೂಲಕ ಬಾಲಕಾರ್ಮಿಕ ಪದ್ಧತಿಯ ಕಾನೂನುಬಾಹಿರತೆ ಹಾಗೂ

3ನೇಯ ಪುಟಕ್ಕೆ

ಸಂಪುಟದಲ್ಲಿ ಯುವಕರಿಗೆ ಅವಕಾಶ ನೀಡುವ ಆಸೆ ಇದೆ, ಆದರೆ ಅಂತಿಮ ನಿರ್ಧಾರ ಹೈಕಮಾಂಡ್ ತೆಗೆದುಕೊಳ್ಳುತ್ತೆ : ಡಿಕೆಶಿ



ಬೆಂಗಳೂರು, ಜು. 5– ಸಚಿವ ಸಂಪುಟ ವಿಸ್ತರಣೆಯಲ್ಲಿ ಯುವಕರಿಗೆ ಮತ್ತು ಹೊಸ ಮುಖಗಳಿಗೆ ಅವಕಾಶ ನೀಡಬೇಕೆಂದು ತಮಗೂ ಆಸೆ ಇದೆ. ಆದರೆ ಕಾಂಗ್ರೆಸ್ ಹೈಕಮಾಂಡ್ ಯಾವ ನಿರ್ಧಾರ ತೆಗೆದುಕೊಳ್ಳುತ್ತದೆಯೋ ಗೊತ್ತಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಶಾಸಕ ವಿಜಯಾನಂದ ಕಾಶಪ್ಪನವರ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಹುನಗುಂದ ಕ್ಷೇತ್ರದಿಂದ ಆಗಮಿಸಿದ ಬೆಂಬಲಿಗರ ನಿಯೋಗದ ಜೊತೆ ಚರ್ಚೆ ನಡೆಸಿದ ಡಿ.ಕೆ.ಶಿವಕುಮಾರ್ ಅವರು, ಸಚಿವ ಸ್ಥಾನಕ್ಕಾಗಿ ಇನ್ನು ಮುಂದೆ ಯಾವ ನಿಯೋಗಗಳು ಬರಬಾರದು ಎಂದು ಹೇಳಿದರು.

ಸಂಪುಟ ವಿಸ್ತರಣೆಯ ಕುರಿತಂತೆ ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರಕ್ಕೆ ಎಲ್ಲರೂ ಬದ್ಧರಾಗಿರಬೇಕು. ಮೊದಲ ಬಾರಿ ಗೆದ್ದಿರುವ ಶಾಸಕರಿಂದ ಹಿಡಿದು, ಆರೇಳು ಬಾರಿ ಆಯ್ಕೆಯಾಗಿರುವ ಹಿರಿಯರನ್ನು ಒಳಗೊಂಡತೆ ಎಲ್ಲರಿಗೂ ಸಚಿವರಾಗಬೇಕೆಂಬ

3ನೇಯ ಪುಟಕ್ಕೆ

ಮುಂದಿನ ವಾರ ಸಚಿವ ಸಂಪುಟ ವಿಸ್ತರಣೆ?

ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ರಾಜ್ಯ ಸರಕಾರದ ಸಚಿವ ಸಂಪುಟ ವಿಸ್ತರಣೆ ಮುಂದಿನ ವಾರದಲ್ಲಿಯೇ ನಡೆಯಲಿದೆ ಎಂದು ತಿಳಿದು ಬಂದಿದೆ.

ಜು.14ರಿಂದ ಆಷಾಢ ಆರಂಭವಾಗಲಿದ್ದು, ಆಗಸ್ಟ್ 12ರ ವರೆಗೂ ಮುಂದುವರಿಯಲಿದೆ. ಈ ಹಿನ್ನೆಲೆಯಲ್ಲಿ ಜು.12ರೊಳಗೆ ಸಚಿವ ಸಂಪುಟ ವಿಸ್ತರಣೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎನ್ನಲಾಗಿದೆ.

ಎಸ್‌ಐಆರ್ ಪ್ರಕ್ರಿಯೆ ಸಂಬಂಧ ಚುನಾವಣಾ ಆಯೋಗ ಆ.5 ರಂದು ಮತದಾರರ ಕರಡು ಪಟ್ಟಿಯನ್ನು ಪ್ರಕಟಿಸಲಿದೆ. ಅನಂತರ ಮಳೆಗಾಲದ ವಿಧಾನ ಮಂಡಲ ಅಧಿವೇಶನ ಸಮಾವೇಶಗೊಳ್ಳುವ ಸಾಧ್ಯತೆ ಇದೆ. ಅಧಿವೇಶನಕ್ಕೂ ಮುನ್ನವೇ ಪರಿಪೂರ್ಣ ಸಂಪುಟ ರಚನೆಯಾಗಬೇಕಿದೆ. ಆ.15ಕ್ಕೆ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಎಲ್ಲ ಜಿಲ್ಲೆಗಳಲ್ಲಿಯೂ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಬೇಕಿದೆ. ಅದಕ್ಕೂ ಮುನ್ನವೇ ಸಂಪುಟ ಪುನರ್ ರಚನೆಯಾಗುವ ಅನಿವಾರ್ಯತೆ ಇದೆ.

ಸಚಿವ ಸಂಪುಟ ವಿಸ್ತರಣೆಯಾಗಲಿದೆ ಎಂಬ ಸುಳಿವು ದೊರೆಯುತ್ತಿದ್ದಂತೆ ಆಕಾಂಕ್ಷಿಗಳು ಲಾಬಿ ತೀವ್ರಗೊಳಿಸಿದ್ದಾರೆ. ನಿನ್ನೆ ಸಚಿವ ಸ್ಥಾನದ ಆಕಾಂಕ್ಷಿಗಳಾಗಿರುವ ಪಿ.ಎಂ.ಅಶೋಕ್ ಪಟ್ಟಣ್, ಎ.ಎಸ್. ಪೊನ್ನಣ್ಣ, ಕೆ.ಎನ್.ರಾಜಣ್ಣ, ಎಂ.ಆರ್. ಸೀತಾರಾಮ್ ಮತ್ತಿತರರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಇನ್ನೊಂದೆಡೆ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ, ಮಾತುಕತೆ ನಡೆಸಿದ್ದಾರೆ. ಒಂದೆಡೆ ಮುಖಂಡರು ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಗೆ ತಯಾರಿ ಮಾಡಿಕೊಳ್ಳುತ್ತಿದ್ದರೆ, ಮತ್ತೊಂದು ಕಡೆ ಆಕಾಂಕ್ಷಿಗಳು ಹಿರಿಯ ನಾಯಕರ ಬೆನ್ನಿಗೆ ಬಿದ್ದು ಅವಕಾಶಕ್ಕಾಗಿ ಒತ್ತಡ ಹೇರುತ್ತಿದ್ದಾರೆ ಎನ್ನಲಾಗಿದೆ.

ಒಟ್ಟಿನಲ್ಲಿ ಹೈಕಮಾಂಡ್ ಸಮತಿ ನೀಡಿದರೆ ಜು.12ರ ರೊಳಗೆ ಸಂಪುಟ ವಿಸ್ತರಣೆಯಾಗುವುದು ಬಹುತೇಕ ಖಚಿತವಾಗಿದೆ. ಮೂಲಗಳ ಪ್ರಕಾರ ಜು.10ರಂದು ಶುಕ್ರವಾರ ಸಚಿವ ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿಯಾಗಿದೆ ಎಂದು ತಿಳಿದು ಬಂದಿದೆ.

ಜು.8ರಂದು ನಗರಕ್ಕೆ ವಿ.ಸೋಮಣ್ಣ: ಡಾ.ಬಾಬುರಾವ್



ರಾಯಚೂರು,ಜು.05–

ಮರ್ಚೇಟ್ಹಾಳ ಹಾಗೂ ರಾಯಚೂರು ನಡುವೆ ಎಲ್ ಸಿ ಸಂಖ್ಯೆ 216 ಹಾಗೂ 217ರ ದ್ವಿಪಥದ ರೈಲ್ವೆ ಮೇಲ್ಸೇತುವೆ ನಿರ್ಮಣ ಕಾರ್ಯಕ್ಕೆ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ಅವರು ಚಾಲನೆ ನೀಡಲಿದ್ದಾರೆ ಎಂದು ರೈಲ್ವೆ ಇಲಾಖೆ ತಿಳಿಸಿರುವುದಾಗಿ ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ.ಬಾಬುರಾವ್ ಅವರು ತಿಳಿಸಿದ್ದಾರೆ.

ಇದೇ ಜುಲೈ 8 ರಂದು ನಗರಕ್ಕೆ ಆಗಮಿಸಲಿರುವ ವಿ.ಸೋಮಣ್ಣ ಅವರು ಅಂದು ಈ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಫೆಬ್ರವರಿ–2026 ರಲ್ಲಿ ತಲಾ ₹40 ಕೋಟಿಗೆ ಟೆಂಡರ್ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

2024–25 ರ ಅವಧಿಯಲ್ಲಿ ರಾಯಚೂರಿಗೆ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಅವರು ಭೇಟಿ ನೀಡಿದ ಸಂದರ್ಭದಲ್ಲಿ ನಾಗರಿಕರ ಪರವಾಗಿ ತಾವು ಹಾಗೂ ಮಾಜಿ ಸಂಸದ ರಾಜಾ ಅಮರೇಶ್ವರ ನಾಯಕ ಅವರು ಹೆಚ್ಚಿನ ಮುತುವರ್ಜಿ ವಹಿಸಿ ರೈಲ್ವೆ ಮೇಲ್ಸೇತುವೆ ಅಗತ್ಯತೆ ಇರುವುದನ್ನು ಮನವರಿಕೆ ಮಾಡಿಕೊಡಲಾಗಿತ್ತು. ನಮ್ಮ ಮನವಿಗೆ ಸ್ಪಂದಿಸಿರುವ ರೈಲ್ವೆ ಸಚಿವರು ಈ ಕಾಮಗಾರಿಗಳಿಗೆ ಅನುಮೋದನೆ ಸಿಗುವಂತೆ ಮಾಡಿರುವುದು ಸ್ವಾಗತಾರ್ಹವಾಗಿದೆ. ಇದರಿಂದ ಅನೇಕ ಹಳ್ಳಿಗಳ ಜನರಿಗೆ ಅನುಕೂಲವಾಗಲಿದೆ ಎಂದು ಅವರು ಸಂತಸ ವ್ಯಕ್ತಪಡಿಸಿರುವ ಅವರು ಈ ಮೇಲ್ಸೇತುವೆ ನಿರ್ಮಿಸಲು ಬಹುದಿನಗಳ ಬೇಡಿಕೆ ಇತ್ತು ಈಗ ಈಡೇರಿದಂತಾಗಿದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಾಶಕ ದದ್ದಲ ಚಾಲನೆ

ರಾಯಚೂರು,ಜು.04–

ಕೃಷ್ಣಾ ನದಿಯಲ್ಲಿರುವ ಕುರ್ವಾ ಕುರ್ದ, ಕುರ್ವಾಕಲ್ ಹಾಗೂ ನಾರದಗಡ್ಡ ಸೇರಿದಂತೆ ಮೂರು ದ್ವೀಪ ಪ್ರದೇಶಗಳಿಗೆ ಶಾಶ್ವತ ಸಂಪರ್ಕ ಕಲ್ಪಿಸುವ ಸೇತುವೆ ಕಾಮಗಾರಿಗಳು ಅಂತಿಮ ಹಂತದಲ್ಲಿದ್ದು, ಇವು ಪೂರ್ಣಗೊಂಡರೆ ರೈತರು, ವಿದ್ಯಾರ್ಥಿಗಳು, ಭಕ್ತರು ಹಾಗೂ ಸ್ಥಳೀಯ ನಿವಾಸಿಗಳ ಬಹುದಿನಗಳ ಕನಸು ನನಸಾಗಲಿದೆ ಎಂದು ರಾಯಚೂರು ಗ್ರಾಮೀಣ ಶಾಸಕ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ದಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ತಿಳಿಸಿದರು.



ಶನಿವಾರ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ನಡೆಸಿದ ಅವರು, ಜುರಾಲ ಯೋಜನೆಯ ಮುಳುಗಡೆ ವ್ಯಾಪ್ತಿಯಲ್ಲಿರುವ ದ್ವೀಪ ಪ್ರದೇಶಗಳ ಸಂಪರ್ಕ ಸೇತುವೆ ಕಾಮಗಾರಿಗಳನ್ನು ವೀಕ್ಷಿಸಿ ಮಾತನಾಡಿದರು. ಕೃಷ್ಣಾ ನದಿಯಲ್ಲಿರುವ ಕುರ್ವಾ ಕುರ್ದ, ಕುರ್ವಾಕಲ್ ಹಾಗೂ ನಾರದಗಡ್ಡ ದ್ವೀಪಗಳಲ್ಲಿ ಹಲವು ದಶಕಗಳಿಂದ ಜನವಸತಿ, ಕೃಷಿ ಚಟುವಟಿಕೆಗಳು ಹಾಗೂ ಧಾರ್ಮಿಕ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಮಳೆಗಾಲದಲ್ಲಿ ನದಿ ತುಂಬಿ ಹರಿದಾಗ ಸ್ಥಳೀಯರು ಬೋಟ್‌ಗಳ ಮೂಲಕ ಸಂಚಾರ ನಡೆಸಬೇಕಾಗಿದ್ದು, ರೈತರು ಬೆಳೆ ಸಾಗಾಟ, ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ತೆರಳುವುದು ಹಾಗೂ ಗರ್ಭಿಣಿಯರು, ವೃದ್ದರು ಸೇರಿದಂತೆ ಸಾರ್ವಜನಿಕರು ಸಾಕಷ್ಟು ಸಂಕಷ್ಟ ಅನುಭವಿಸುತ್ತಿದ್ದರು ಎಂದು ಅವರು ಹೇಳಿದರು.

ದತ್ತಪೀಠ ಹಾಗೂ ಶ್ರೀಪಾದ ವಲ್ಲಭರ ಪವಿತ್ರ ಕ್ಷೇತ್ರಗಳಿಗೆ ಕರ್ನಾಟಕ, ಮಹಾರಾಷ್ಟ್ರ, ಆಂಧ್ರ ಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳಿಂದ ಸಾವಿರಾರು ಭಕ್ತರು ಭೇಟಿ ನೀಡುತ್ತಿದ್ದು, ಸುರಕ್ಷಿತ ಸಂಚಾರಕ್ಕಾಗಿ ಸೇತುವೆಗಳ ನಿರ್ಮಾಣ ಅನಿವಾರ್ಯವಾಗಿತ್ತು ಎಂದು ತಿಳಿಸಿದರು.

3ನೇಯ ಪುಟಕ್ಕೆ

ಜಿಲ್ಲಾ ಖಜಾನೆ ಉಪನಿರ್ದೇಶಕರ ವಿರುದ್ಧ ಕ್ರಮಕ್ಕೆ ಒತ್ತಾಯ



ರಾಯಚೂರು, ಜು.5– ಜಿಲ್ಲಾ ಖಜಾನೆ ಇಲಾಖೆ ಉಪನಿರ್ದೇಶಕ ಸಿದ್ದರಾಮೇಶ್ವರ ವಿ.ಟಿ ಅವರ ಮೇಲೆ ಸೂಕ್ತ ತನಿಖೆ ನಡೆಸಿ, ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ದಲಿತ ಸೇನೆ ಮುಖಂಡರು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕಧಿಕಾರಿಗಳ ಮೂಲಕ ರಾಜ್ಯ ಖಜಾನೆ ಆಯುಕ್ತರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದೆ. ಜಿಲ್ಲಾ ಖಜಾನೆ ಇಲಾಖೆಯಲ್ಲಿ ಭ್ರಷ್ಟಚಾರದ ಆರೋಪಗಳು ಕೇಳಿ ಬರುತ್ತಿದ್ದು, ಇಲಾಖೆಗೆ ದೂರು ಸಲ್ಲಿಸಿದರು ಯಾವುದೇ ರೀತಿ ಸ್ಪಂದನೆ ನೀಡುತ್ತಿಲ್ಲ ಎಂದು ದೂರಿದರು.

ಇಲಾಖೆ ಬಂದ ಬಿಲ್ ಗಳನ್ನು ಪರಿಶೀಲನೆ ನಡೆಸದೆ ಬಿಲ್ಲುಗಳನ್ನು ಪಾವತಿಸಿ ಅಧಿಕಾರ ದುರ್ಬಳಕೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಇವರ ವರ್ತನೆಯ ಸಾರ್ವಜನಿಕ ವಲಯದಲ್ಲಿ ಅಪಸ್ವರ ಕೇಳಿ ಬರುತ್ತಿದೆ. ಬೋಗಸ್ ಕಾಮಗಾರಿಗಳ ಹೆಸರಿನಲ್ಲಿ ಬಿಲ್ಲುಗಳನ್ನು ಸಹ ಪಡೆಯುತ್ತಿದ್ದಾರೆ ಎಂದು ದೂರಿದರು.ಅವರ ವಿರುದ್ಧ ಗಂಭೀರ ಆರೋಪ ಕೇಳಿ ಬಂದರೂ ಇಂತಹ ಬಿಲ್ಲುಗಳನ್ನು ಸೂಕ್ಷ್ಮವಾಗಿ ಪರಿಶೀಲಿಸದೆ ಬಿಲ್ಲುಗಳನ್ನು ಪಾಸು ಮಾಡುತ್ತಿದ್ದಾರೆ ಎಂದರು.

ಇವರ ವರ್ತನೆಯಿಂದ ಸಾರ್ವಜನಿಕ ವಲಯದಲ್ಲಿ

ಮೂರನೇಯ ಪುಟಕ್ಕೆ

ಪಾದಚಾರಿಗೆ ಪಲ್ಸರ್ ಬೈಕ್ ಡಿಕ್ಕಿ, ಪಾದಚಾರಿ ಸಾವು

ರಾಯಚೂರು,ಜು.5–

ಜಿಲ್ಲೆಯ ಮಾನ್ವಿ ತಾಲೂಕಿನ ಅಮರೇಶ್ವರ ಕ್ಯಾಂಪ್‌ನ ಬಳಿ ಘಟನೆ ನಡೆದಿದೆ.

ಅಪಘಾತದಲ್ಲಿ ಪಾದಚಾರಿ ರಾಜ (30) ಮೃತ ದುರ್ದೈವಿಯಾಗಿದ್ದಾನೆ. ಯುವಕ ರಾಜ್ಯ ಹೆದ್ದಾರಿ ಪಕ್ಕದಲ್ಲಿ ವಾಕಿಂಗ್ ಮಾಡುತ್ತಿದ್ದ ವೇಳೆ ಹಿಂಬದಿಯಿಂದ ಬೈಕ್ ಡಿಕ್ಕಿಯಾಗಿದೆ.



ಅಪಘಾತದಲ್ಲಿ ಬೈಕ್ ಸವಾರ ಪ್ರಾರಪ್ಪ ಗಂಭೀರವಾಗಿ ಗಾಯಗೊಂಡಿದೆ.

ನಂತರ ಗಾಯಾಳುವನ್ನು ರಾಯಚೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಸಿದ್ದಾರೆ.

ಹಿಂಬದಿ ಸವಾರ ನಂದೀಶ್ ಮಾನ್ವಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿದ್ದಾರೆ.ಅಪಘಾತದಲ್ಲಿ ಮೃತಪಟ್ಟ ರಾಜ ಅವರ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು, ತನಿಖೆ ಆರಂಬಿಸಿದ ಪೊಲೀಸರು..

ರಾಜಕೀಯ ಮುಖಂಡರನ್ನು ದೂರವಿಟ್ಟು ಬಿಎಲ್‌ಒ ಗಳು ಎಸ್‌ಐಆರ್ ಪಾರದರ್ಶಕ ಸಮೀಕ್ಷೆಗೆ – ವಿನೋದರೆಡ್ಡಿ ಒತ್ತಾಯ



ರಾಯಚೂರು, ಜು.5 – ಜಿಲ್ಲೆಯಲ್ಲಿ ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ ಐ ಆರ್) ಪ್ರಕ್ರಿಯೆಯಲ್ಲಿ ಮತಗಟ್ಟೆ ಅಧಿಕಾರಿಗಳು ನಿಯಮ ಬದ್ದವಾಗಿ ಕಾರ್ಯ ನಿರ್ವಹಿಸದೆ ರಾಜಕೀಯ ಮುಖಂಡರು ಹೇಳಿದಂತೆ ಸಮೀಕ್ಷೆ ಮಾಡುತ್ತಿರುವುದು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದ್ದು, ಕೂಡಲೇ ಬಿ ಎಲ್ ಓ ಗಳು ಚುನಾವಣಾ ಆಯೋಗ ನಿರ್ದೇಶನದಂತೆ ರಾಜಕೀಯ ಮುಖಂಡರು ದೂರವಿಟ್ಟು ಪಾರದರ್ಶಕವಾಗಿ ನಡೆಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾದ ವಿನೋದ ರೆಡ್ಡಿ ಎಂ ಅವರು ಆಗ್ರಹಿಸಿದ್ದಾರೆ.

ಕೇಂದ್ರ ಚುನಾವಣೆ ಆಯೋಗ ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಬಿ ಎಲ್ ಓ ಗಳು ಮನೆ ಮನೆಗೆ ತೆರಳಿ ಅರ್ಹ ಮತದಾರರನ್ನು ಕೈಬಿಡದಂತೆ ಹಾಗೂ ಹೊಸ ಸೇರ್ಪಡೆ ಮಾಡಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದೆ . ಆದರೆ ರಾಜ್ಯ ಹಾಗೂ ಜಿಲ್ಲೆಯಲ್ಲಿ ಬಿ ಎಲ್ ಓ ಗಳು ಮನೆಮನೆಗೆ ತೆರಳಿ ಸಮೀಕ್ಷೆ ಕೈಗೊಳ್ಳದೆ ದೇವಸ್ಥಾನ ಮಸೀದಿ ಮತ್ತು ಚರ್ಚೆಗಳಲ್ಲಿ ಕುಳಿತು ಸಮೀಕ್ಷೆ ಮಾಡಲಾಗುತ್ತದೆ. ಇದರಿಂದ ಅನರ್ಹ ಮತದಾರರನ್ನು ಸೇರ್ಪಡೆ ಮಾಡಲಾಗುತ್ತಿದೆ ಎಂದು ಗಂಭೀರ ಆರೋಪ ಕೇಳಿ ಬರುತ್ತಿದೆ. ರಾಜ್ಯ ಚುನಾವಣಾ ಆಯೋಗ ಇದನ್ನು ಗಂಭೀರವಾಗಿ ಪರಿಗಣಿಸಿ ಬಿ ಎಲ್ ಓ ಗಳಿಗೆ ಕಟ್ಟು ನಿಟ್ಟಿನ ಸೂಚನೆ ನೀಡಬೇಕೆಂದು ಆಗ್ರಹಿಸಿದರು. ಕರ್ನಾಟಕದಲ್ಲಿ ಯಾವುದೇ ಅರ್ಹ ಮತದಾರರನ್ನು ಪಟ್ಟಿಯಿಂದ ಕೈಬಿಡದಂತೆ ಚುನಾವಣಾ ಆಯೋಗ ಕ್ರಮವಹಿಸಬೇಕು. ಬಿ ಎಲ್ ಓ ಗಳು ರಾಜಕೀಯ ಮುಖಂಡರನ್ನು ದೂರವಿಟ್ಟು ಕೇಂದ್ರ ಚುನಾವಣೆ ಆಯೋಗ ನಿರ್ದೇಶನದಂತೆ ಮನೆ ಮನೆಗೆ ತೆರಳಿ ಅರ್ಹ ಮತದಾರರನ್ನು ಕೈ ಬಿಡದಂತೆ ಪಾರದರ್ಶಕವಾಗಿ ನಡೆಸಬೇಕು. ಚುನಾವಣೆ ಆಯೋಗ ನಿಯಮ ಉಲ್ಲಂಘಿಸಿದ ಅಂತಹ ಬಿ ಎಲ್ ಓ ಗಳ ವಿರುದ್ಧ ಕಠಿಣ ಕ್ರಮಕ್ಕೆ ಆಯೋಗ ಮುಂದಾಗಬೇಕು ಎಂದು ಮನವಿ ಮಾಡಿದರು.

ಬಳ್ಳಾರಿಯಲ್ಲಿ ಎಸ್‌ಐಆರ್ ಕುರಿತು ಜಾಗೃತಿ: ಆಕರ್ಷಕ ರಂಗೋಲಿ ಸ್ಪರ್ಧೆ ಆಯೋಜನೆ

ದೋಷರಹಿತ ಮತದಾರರ ಪಟ್ಟಿ ತಯಾರಿಕೆಗೆ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ: ಜಿ.ಪಂ. ಸಿಇಒ ಕರೆ

ಬಳ್ಳಾರಿ,ಜು.05-

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪಾರದರ್ಶಕ ಮತದಾರರ ಪಟ್ಟಿ ಸಿದ್ಧಪಡಿಸುವ ನಿಟ್ಟಿನಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಈ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದ ಮುಂಭಾಗದಲ್ಲಿ ಶನಿವಾರ ವಿಶೇಷ 'ಎಸ್‌ಐಆರ್ ಮತದಾನ ಜಾಗೃತಿ ರಂಗೋಲಿ ಸ್ಪರ್ಧೆ' ಆಯೋಜಿಸಲಾಗಿತ್ತು.

ಮತದಾರರಲ್ಲಿ ಎಸ್‌ಐಆರ್ ಪ್ರಕ್ರಿಯೆಯ ಕುರಿತು ವ್ಯಾಪಕ ಜಾಗೃತಿ ಮೂಡಿಸುವ ಮಹತ್ತರ ಉದ್ದೇಶವನ್ನು ಈ ಕಾರ್ಯಕ್ರಮ ಹೊಂದಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್



ಹಾರೀಸ್ ಸುಮೇರ್ ಅವರು ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಪ್ರತಿಯೊಂದು ಮತವೂ ಅಮೂಲ್ಯವಾಗಿದೆ. ದೋಷರಹಿತ ಮತದಾರರ ಪಟ್ಟಿ ರೂಪಿಸಲು ಪ್ರತಿಯೊಬ್ಬ ಅರ್ಹ ನಾಗರಿಕನೂ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ಈ ನಿಟ್ಟಿನಲ್ಲಿ ಅರಿವು ಮೂಡಿಸಲು ರಂಗೋಲಿ ಅತ್ಯುತ್ತಮ ಮಾಧ್ಯಮವಾಗಿದೆ ಎಂದು ತಿಳಿಸಿದರು.

ಈ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಈ ತಿಂಗಳ ಜುಲೈ 29ರ ವರೆಗೆ ಬೂತ್ ಮಟ್ಟದ ಅಧಿಕಾರಿಗಳು ಪ್ರತಿ ಮನೆ ಮನೆಗೂ ಭೇಟಿ ನೀಡಿ ಗಣತಿ ನಮೂನೆಗಳನ್ನು ಮನೆ-ಮನೆಗೆ ನೀಡಲಿದ್ದಾರೆ. ಆ ಫಾರ್ಮ್‌ಗಳನ್ನು ಯಾವುದೇ ತಪ್ಪುಗಳಿಲ್ಲದಂತೆ ಜಾಗರೂಕತೆಯಿಂದ ಭರ್ತಿ ಮಾಡಿ ನೀಡಬೇಕು ಎಂದರು.

ಪ್ರಜಾಪ್ರಭುತ್ವದ ಹಬ್ಬದಲ್ಲಿ ಪಾಲ್ಗೊಳ್ಳಲು ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿರುವುದು ಕಡ್ಡಾಯ. ಹಾಗಾಗಿ ಈ ಮಹತ್ವದ ಪ್ರಕ್ರಿಯೆಯ ಕುರಿತು ಸಮಾಜದ ಪ್ರತಿಯೊಬ್ಬರಿಗೂ ಅರಿವು ಮೂಡಿಸುವುದು ಇಂದಿನ ಅಗತ್ಯವಾಗಿದೆ ಎಂದರು.

ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಮಹಿಳೆಯರು ತಾವು ಬಿಡಿಸಿದ ಆಕರ್ಷಕ ರಂಗೋಲಿಗಳ ಭಾವಚಿತ್ರಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ತಮ್ಮ ಮೊಬೈಲ್ ಸ್ಟೇಟಸ್‌ಗಳಲ್ಲಿ ಹಂಚಿಕೊಳ್ಳಬೇಕು. ಈ ಮೂಲಕ ಸಾರ್ವಜನಿಕರಲ್ಲಿ ಮತದಾನ ಮತ್ತು ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಇನ್ನಷ್ಟು ಹೆಚ್ಚಿನ ಜಾಗೃತಿ ಮೂಡಿಸಲು ಸಾಧ್ಯವಾಗುತ್ತದೆ ಎಂದು ಅಧಿಕಾರಿಗಳು ಸಲಹೆ ನೀಡಿದರು.

ಮುಂದಿನ ದಿನಗಳಲ್ಲಿ ಇದೇ ಮಾದರಿಯ ಎಸ್‌ಐಆರ್ ಜಾಗೃತಿ ರಂಗೋಲಿ ಸ್ಪರ್ಧೆಗಳನ್ನು ಗ್ರಾಮ ಪಂಚಾಯತ್ ಮಟ್ಟದಲ್ಲೂ ಸಹ ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ರಂಗೋಲಿಯಲ್ಲಿ ಮೂಡಿದ ಎಸ್‌ಐಆರ್ ಜಾಗೃತಿ ಸಂದೇಶ: ಸ್ಪರ್ಧೆಯಲ್ಲಿ ಸ್ವ-ಸಹಾಯ ಗುಂಪಿನ ಮಹಿಳೆಯರು ಉತ್ಸಾಹದಿಂದ ಭಾಗವಹಿಸಿದ್ದರು. ಸ್ಪರ್ಧಾಳುಗಳು ತಮ್ಮ ಕಲ್ಪನಾ ಶಕ್ತಿಯ ಮೂಲಕ ಆಕರ್ಷಕ ರಂಗೋಲಿಗಳನ್ನು ಬಿಡಿಸಿ ಗಮನ ಸೆಳೆದರು. ಎಸ್‌ಐಆರ್ ಕುರಿತ ಜಾಗೃತಿ ಸಂದೇಶಗಳು ಮತ್ತು ಲೋಗೋಗಳು ರಂಗೋಲಿ ಬಣ್ಣಗಳ ಮೂಲಕ ನೆಲದ ಮೇಲೆ ಮೂಡಿ ಬಂದವು. ನಂತರ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಜಿಲ್ಲಾಡಳಿತದ ವತಿಯಿಂದ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನಗಳನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಜಿಪಂ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ ಸೇರಿದಂತೆ ನೂರಕ್ಕೂ ಹೆಚ್ಚು ಮಹಿಳೆಯರು ಅತ್ಯಂತ ಉತ್ಸಾಹದಿಂದ ಭಾಗವಹಿಸಿದ್ದರು.

ವಿವಿಧೆಡೆ ಡಿಸಿ ಭೇಟಿ ಎಸ್.ಐ.ಆರ್ ಪ್ರಗತಿ ಪರಿಶೀಲನೆ

ಬಾಗಲಕೋಟೆ, ಜು.05-

ಜಿಲ್ಲೆಯ ಹುನಗುಂದ, ಇಲಕಲ್ಲ ಹಾಗೂ ಅಮೀನಗಡ ಪಟ್ಟಣದ ಮನೆ ಮನೆಗೆ ಜಿಲ್ಲಾಧಿಕಾರಿ ಸಂಗಪ್ಪ ಅವರು ಶನಿವಾರ ಭೇಟಿ ನೀಡಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್.ಐ.ಆರ್) ಕಾರ್ಯದ ಪ್ರಗತಿಯನ್ನು ಪರಿಶೀಲಿಸಿದರು.

ಮನೆ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಬೂತ್ ಮಟ್ಟದ ಅಧಿಕಾರಿಗಳು ಹಾಗೂ ಮೇಲ್ವಿಚಾರಕರು ಮತದಾರರಿಗೆ ಎನ್ಯೂಮಿನೇಷನ್ ಫಾರಂ ವಿತರಿಸುತ್ತಿರುವುದು, ಅಗತ್ಯ ಮಾಹಿತಿಯನ್ನು ಸಂಗ್ರಹಿಸುತ್ತಿರು ವುದು ಹಾಗೂ ದಾಖಲೆಗಳ ಪರಿಶೀಲನೆ ನಡೆಸುತ್ತಿರುವ ವಿಧಾನವನ್ನು ಅವಲೋಕಿಸಿದರು. ಮತದಾರರಿಗೆ ಎಸ್.ಐ.ಆರ್ ಕುರಿತು ಸಮರ್ಪಕ ಮಾಹಿತಿ ನೀಡಿ ಅರ್ಹ ಪ್ರತಿಯೊಬ್ಬ ಮತದಾರರ ವಿವರಗಳನ್ನು ನಿಖರವಾಗಿ ದಾಖಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯದ ಹಿನ್ನಲೆಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು ಹಾಗೂ ಮೇಲ್ವಿಚಾರಕರಿಗೆ



ಸಾರ್ವಜನಿ ಕರು ಅಗತ್ಯ ದಾಖಲೆಗಳನ್ನು ಒದಗಿಸುವ ಮೂಲಕ ಎಸ್.ಐ.ಆರ್ ಕಾರ್ಯಕ್ಕೆ ಸಹಕರಿಸುವಂತೆ ಜಿಲ್ಲಾಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡರು.

ಹುನಗುಂದಲ್ಲಿರುವ ಡಿ.ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ ಅನಿರೀಕ್ಷಿತವಾಗಿ ಭೇಟಿ ನೀಡಿ, ವಿದ್ಯಾರ್ಥಿಗಳಿಗೆ ಕಲ್ಪಿಸಲಾಗುತ್ತಿರುವ ಮೂಲಸೌಕರ್ಯ ಹಾಗೂ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದರು. ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಪೂರೈಕೆ, ಸ್ವಚ್ಛತೆ, ಆರೋಗ್ಯ ಮತ್ತು ಅಗತ್ಯ ಮೂಲಸೌಕರ್ಯಗಳ ನಿರ್ವಹಣೆಗೆ ವಿಶೇಷ ಗಮನ ಹರಿಸಬೇಕು. ಲೋಪ ಕಂಡುಬಂದಲ್ಲಿ ಕೂಡಲೇ ಸರಿಪಡಿಸುವ ಕೆಲಸವಾಗಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಹುನಗುಂದ ತಹಶೀಲ್ದಾರ ಕಚೇರಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಕಚೇರಿ ಕಾರ್ಯವೈಖರಿ, ಸಾರ್ವಜನಿಕ ಸೇವೆಗಳ ಅನುಷ್ಠಾನದ ಪ್ರಗತಿಯನ್ನು ಪರಿಶೀಲಿಸಿದರು. ಕಂದಾಯ ಇಲಾಖೆಯ ವಿವಿಧ ದಾಖಲೆಗಳು, ಅರ್ಜಿಗಳ ವಿಲೇವಾರಿ, ಪಹಣಿ, ಇ-ಖಾತೆ, ಆದಾಯ ಮತ್ತು ಜಾತಿ ಪ್ರಮಾಣ ಪತ್ರಗಳ ವಿತರಣೆಯ ಪ್ರಗತಿ ಹಾಗೂ ದೂರುಗಳ ನಿರ್ವಹಣೆ ಸೇರಿದಂತೆ ಸಾರ್ವಜನಿಕರ ಸೇವೆಗಳ ಕುರಿತು ಮಾಹಿತಿಯನ್ನು ಪಡೆದುಕೊಂಡರು.

ಸಾರ್ವಜನಿಕರು ಕಚೇರಿಗೆ ಬಂದಾಗ ಯಾವುದೇ ತೊಂದರೆಯಾಗದಂತೆ ಸುಗಮ ಸೇವೆ ಒದಗಿಸುವದರ ಜೊತೆಗೆ ಅವರೊಂದಿಗೆ ಸೌಜನ್ಯದಿಂದ ವರ್ತಿಸಿ, ಅವರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮೂಲಕ ಜನಸ್ನೇಹಿ ಆಡಳಿತ ನೀಡಬೇಕು ಎಂದರು.

ಇಲಾಖೆಗಳು ಪರಸ್ಪರ ಸಮನ್ವಯತೆಯಿಂದ ನಿಖರ ಅಂಕಿ-ಅಂಶಗಳೊಂದಿಗೆ ಸಮಗ್ರ ವರದಿ ಸಿದ್ಧಪಡಿಸಬೇಕು : ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ

ವಿಜಯನಗರ,ಜು.05-

ಜಿಲ್ಲೆಯ ಇಂದಿನ ನೈಜ ಸ್ಥಿತಿಗತಿಯನ್ನು ಬಿಂಬಿಸುವ ಜಿಲ್ಲಾ ಮಾನವ ಅಭಿವೃದ್ಧಿ ವರದಿ ಹಾಗೂ ಭವಿಷ್ಯದ ಅಗತ್ಯತೆಗಳನ್ನು ಪೂರೈಸುವ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ-2031 ರೂಪಿಸುವ ಕಾರ್ಯ ಪ್ರಗತಿಯಲ್ಲಿದ್ದು, ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯತೆಯಿಂದ ನಿಖರ ಅಂಕಿ-ಅಂಶಗಳೊಂದಿಗೆ ಸಮಗ್ರ ವರದಿ ಸಿದ್ಧಪಡಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಮೇಲ್ವಿಚಾರಣ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿಕಾರಿಗಳು ನೀಡುವ ದತ್ತಾಂಶ ರಸ್ತೆ, ಕಟ್ಟಡಗಳಂತಹ ಭೌತಿಕ ಅಭಿವೃದ್ಧಿಗೆ ಸೀಮಿತವಾಗದೇ ಜಿಲ್ಲೆಯ ಜನರ ನೈಜ ಜೀವನಮಟ್ಟ ಹೇಗಿದೆ ಎಂಬುದನ್ನು ತಿಳಿಸುವ ಉಪಯುಕ್ತ ವರದಿಯಾಗಿದೆ. ಜಿಲ್ಲೆಯ ಜನರ ಸರಾಸರಿ ಜೀವಿತಾವಧಿ, ತಾಯಿ-ಮಗು ಮರಣ ಪ್ರಮಾಣ, ಪೌಷ್ಟಿಕತೆಯ ಮಟ್ಟ ಮತ್ತು ಆರೋಗ್ಯ ಸೌಕರ್ಯಗಳ ಲಭ್ಯತೆ.



ಸಾಕ್ಷರತಾ ಪ್ರಮಾಣ, ಶಾಲಾ ದಾಖಲಾತಿ, ಹೆಣ್ಣುಮಕ್ಕಳ ಶಿಕ್ಷಣದ ಸ್ಥಿತಿಗತಿ ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳ ಹೀಗೆ ಎಲ್ಲಾ ಅಂಶಗಳನ್ನು ಒಳಗೊಂಡಿರುತ್ತದೆ.

ಆದ್ದರಿಂದ ಅಧಿಕಾರಿಗಳು ನೀಡುವ ದತ್ತಾಂಶ ನಿಖರ ಮತ್ತು ಸ್ಪಷ್ಟತೆಯಿಂದ ಕೂಡಿರಬೇಕು. ಇದು ಭವಿಷ್ಯದ ಜೀವನ ಮಟ್ಟ ಸುಧಾರಣೆಗೆ ಸಹಕಾರಿಯಾಗಲಿದೆ. ಈ ನಿಟ್ಟಿನಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ, ಪೌಷ್ಟಿಕ ಆಹಾರ ಮತ್ತು ವಸತಿ ಸೌಕರ್ಯಗಳ ಒದಗಿಸಬೇಕು. ಜಿಲ್ಲೆಯ ಯಾವ ತಾಲೂಕುಗಳು ಅಥವಾ ಗ್ರಾಮ ಪಂಚಾಯತಿಗಳು ಶಿಕ್ಷಣ, ಆರೋಗ್ಯ ಮತ್ತು ಆರ್ಥಿಕವಾಗಿ ಹಿಂದುಳಿದಿವೆ ಎಂಬುದನ್ನು ಗುರುತಿಸಿ ಗ್ರಾಮಗಳ ಅಭಿವೃದ್ಧಿಗೆ ಒತ್ತು ನೀಡಬೇಕು. ಈ ಮೂಲಕ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ಸಿಗುವಂತಾಗಬೇಕು ಈ ನಿಟ್ಟಿನಲ್ಲಿ ಅವರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವ ಮೂಲಕ ಸಮಾಜದ ಮುಖ್ಯ ವಾಹಿನಿಗೆ ತರಬೇಕು ಎಂದರು.

ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆಯು ಮುಂದಿನ 5 ವರ್ಷಗಳ ಅಂದರೆ 2031ರ ಗಮನದಲ್ಲಿಟ್ಟುಕೊಂಡು, ಜಿಲ್ಲೆಯನ್ನು ಎಲ್ಲಾ ಹಂತಗಳಲ್ಲಿಯೂ ಮಾದರಿ ಜಿಲೆಯಾಗಿಸಲು ರೂಪಿಸುವ ದೂರದೃಷ್ಟಿ ಯೋಜನೆಯಾಗಿದೆ. ಈ ನಿಟ್ಟಿನಲ್ಲಿ ಮುಂದಿನ ಪೀಳಿಗೆಗೆ ತೊಂದರೆಯಾಗದಂತೆ ಪರಿಸರವನ್ನು ಉಳಿಸಿ ಬೆಳೆಸುವ ಮೂಲಕ ಹನಿ ನೀರಾವರಿ, ಅಂತರ್ಜಲ ವೃದ್ಧಿ, ಆಧುನಿಕ ಕೃಷಿ ಪದ್ಧತಿ ಮತ್ತು ರೈತರ ಆದಾಯ ದ್ವಿಗುಣಗೊಳಿಸಬೇಕು. ಸ್ಥಳೀಯ ಸಂಪನ್ಮೂಲಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಯುವಕರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಸ್ಥಳೀಯವಾಗಿ ಉದ್ಯೋಗಾವಕಾಶ ನೀಡಿ ವಲಸೆ ತಡೆಯಬೇಕು. ನಗರ ಮತ್ತು ಸ್ಥಳೀಯ ಆಡಳಿತ ಸಂಸ್ಥೆಗಳಿಂದ ಪ್ರತಿನಿತ್ಯ ಉಂಟಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ಮೂಲಕ ತ್ಯಾಜ್ಯ ಮುಕ್ತ ಜಿಲ್ಲೆಯಾಗಿಸಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ನೀಡುವ ವರದಿ ಅಥವಾ ಯೋಜನೆ ಕೇವಲ ಕಾಗದದ ಮೇಲೆ ಉಳಿಯಬಾರದು. ಅದಕ್ಕಾಗಿಯೇ ಜಿಲ್ಲಾ ಮಟ್ಟದ ಉನ್ನತ ಅಧಿಕಾರಿಗಳ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಿಇಒ ನೋಂಗ್ಜಾಯ್ ಮಹಮ್ಮದ್ ಅಲಿ ಅಕ್ರಂ ಷಾ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಅನ್ನದಾನಸ್ವಾಮಿ, ಹಂಪಿ ವಿವಿಯ ಅಭಿವೃದ್ಧಿ ಅಧ್ಯಯನ ವಿಭಾಗದ ಮುಖ್ಯಸ್ಥ ಹಾಗೂ ಸಮಾಜ ವಿಜ್ಞಾನ ನಿಕಾಯದ ಡೀನ್ ಹೆಚ್.ಡಿ.ಪ್ರಶಾಂತ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.



ಕೊಪ್ಪಳ ಜಿಲ್ಲೆಯಲ್ಲಿ ಹಿಂದುಳಿದ ವರ್ಗದ ಪತ್ರಕರ್ತರಿಗೆ ಮೀಡಿಯಾ ಕಿಟ್ ವಿತರಣೆ

ಕೊಪ್ಪಳ ಜು.05-

ಕೊಪ್ಪಳ ಜಿಲ್ಲೆಯಲ್ಲಿ 2025-26ನೇ ಸಾಲಿನಲ್ಲಿ ಮಾಧ್ಯಮ ಮಾನ್ಯತೆ ಹೊಂದಿರುವ ಹಿಂದುಳಿದ ವರ್ಗದ ಪತ್ರಕರ್ತರಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಲ್ಯಾಪಟಾಪ್ ಹಾಗೂ ಕ್ಯಾಮರಾ ಉಪಕರಣಗಳ ಒಳಗೊಂಡ ಮೀಡಿಯಾ ಕಿಟ್ ಅನ್ನು ವಸತಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಕೆ.ಪಿ ಮೋಹನ್ ರಾಜ್ ಅವರು ಜುಲೈ 4ರಂದು ವಿತರಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಕೃತಿ ವಿಕೋಪ ಪರಿಸ್ಥಿತಿಯ ಅವಲೋಕನ ಸಭೆಯ ಬಳಿಕ ಕಾರ್ಯದರ್ಶಿಗಳು, ಕೊಪ್ಪಳ ಜಿಲ್ಲೆಯ ಹಿಂದುಳಿದ ವರ್ಗದ ಪತ್ರಕರ್ತರಾದ ಪ್ರಕಾಶ ಕಂದಕೂರ ಅವರಿಗೆ ಸಾಂಕೇತಿಕವಾಗಿ ಕಿಟ್ ವಿತರಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ.ಸುರೇಶ್ ಬಿ.ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಗವಿಸಿದ್ದಪ್ಪ ಹೊಸಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.



ವಿವಿಧ ಅಭಿವೃದ್ಧಿ ಕಾಮಗಾರಿ ಪರಿಶೀಲಿಸಿದ ಸಿಇಓ ಗಜಾನನ ಬಾಲೆ

ನಿಗದಿತ ಅವಧಿಯೊಳಗೆ ಕಾಮಗಾಗಿ ಪೂರ್ಣಗೊಳಿಸಲು ಸೂಚನೆ

ಬಾಗಲಕೋಟೆ,ಜು.05-

ಜಮಖಂಡಿ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಗ್ರಾಮೀಣ ವ್ಯಾಪ್ತಿಯಲ್ಲಿ ಕೈಗೊಂಡ ವಿವಿಧ ಅಭಿವೃದ್ಧಿ ಕಾಮಗಾರಿಗಳ ಸ್ಥಳಕ್ಕೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಅವರು ಶನಿವಾರ ಭೇಟಿ ನೀಡಿ ಪರಿಶೀಲನೆ ನಡೆಸಿದು.

ಜಮಖಂಡಿ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಗ್ರಾಮೀಣ ಕುಡಿಯುವ ನೀರು, ಜಲ ಜೀವನ್ ಮಿಷನ್, ಆರೋಗ್ಯ, ಶಿಕ್ಷಣ, ಗ್ರಾಮ ಪಂಚಾಯತ್ ಆಡಳಿತ ಹಾಗೂ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ರಮಗಳ ಪ್ರಗತಿಯನ್ನು ಪರಿಶೀಲಿಸಿದರು. ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಾರ್ವಜನಿಕರ ಅಗತ್ಯಗಳಿಗೆ ಅನುಗುಣವಾಗಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು ಎಂದರು.

ಹೊನ್ನೂರು ಗ್ರಾಮದಲ್ಲಿ ಡಿಬಿಓಟಿ ಸ್ಕೀಮ್-1 ಅಡಿಯಲ್ಲಿ ನಿರ್ಮಾಣ ಹಂತದಲ್ಲಿರುವ 325 ಕೆ.ಎಲ್. ಸಾಮರ್ಥ್ಯದ ಓವರ್ ಹೆಡ್ ಟ್ಯಾಂಕ್ ಕಾಮಗಾರಿ, ರಾಮತೀರ್ಥ ಕೆರೆ, ಕೊಳವೆಬಾವಿ, ಹುನ್ನೂರು ಕೆರೆ ಹಾಗೂ ಹುನ್ನೂರು ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಕುಡಿಯುವ ನೀರಿನ ವ್ಯವಸ್ಥೆ, ಗ್ರಾಮ ಪಂಚಾಯತ್ ಆಡಳಿತ ಹಾಗೂ ತೆರಿಗೆ ವಸೂಲಾತಿ ಪ್ರಗತಿಯನ್ನು ಪರಿಶೀಲಿಸಿದರು. ತೆರಿಗೆ ವಸೂಲಾತಿಯನ್ನು ತ್ವರಿತಗೊಳಿಸಿ, ನಿಗದಿತ ಗುರಿಯನ್ನು ಕಡ್ಡಾಯವಾಗಿ ಸಾಧಿಸಬೇಕು. ತೆರಿಗೆ ವಸೂಲಾತಿ ಗುರಿ ಸಾಧಿಸಲು ವಿಫಲವಾಗುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ನಿಯಮಾನುಸಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಹುನೂರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆರೋಗ್ಯ ಸೇವೆಗಳ ಕುರಿತು ಮಾಹಿತಿ ಪಡೆದು ಅಗತ್ಯ ಸಲಹೆಗಳನ್ನು ನೀಡಿದರು. ಮತದಾರರ ಮಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ರಮದ ಅಂಗವಾಗಿ ಗ್ರಾಮದ ಎರಡು ಮನೆಗಳಿಗೆ ಭೇಟಿ ನೀಡಿ ಮತದಾರರ ಪರಿಷ್ಕರಣೆ ಹಿನ್ನಲೆಯಲ್ಲಿ ಎನ್ಯೂಮಿನೇಷನ್ ಫಾರಂ ವಿತರಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಬಳಿಕ ಹಿಪ್ಪರಗಿ ಬ್ಯಾರೇಜ್, ಪಿಎಂ ಶ್ರೀ ಸರ್ಕಾರಿ ಪ್ರಾಥಮಿಕ ಶಾಲೆ, ಆಃಔಖ ಛಿ-01 ಅಡಿಯಲ್ಲಿ ನಿರ್ಮಾಣ ಹಂತದಲ್ಲಿರುವ ಇಂಟೇಕ್ ಜಾಕ್‌ವೆಲ್, ಜಲ ಜೀವನ್ ಮಿಷನ್ ಕಾಮಗಾರಿಗಳು ಹಾಗೂ ಹಿಪ್ಪರಗಿ ನೀರು ಶುದ್ಧೀಕರಣ ಘಟಕ ಕಾಮಗಾರಿಗಳನ್ನು ಪರಿಶೀಲಿಸಿ,

ಗುಣಮಟ್ಟ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಮಖಂಡಿ ಉಪವಿಭಾಗದ ಕಂಕಣವಾಡಿಯಲ್ಲಿರುವ ತಾಲೂಕು ಮಟ್ಟದ ಗ್ರಾಮೀಣ ಕುಡಿಯುವ ನೀರಿನ ಗುಣಮಟ್ಟ ಪರೀಕ್ಷಾ ಪ್ರಯೋಗಾಲಯಕ್ಕೆ ಭೇಟಿ ನೀಡಿ ಪ್ರಯೋಗಾಲಯದ ಕಾರ್ಯವೈಖರಿ ಹಾಗೂ ಕುಡಿಯುವ ನೀರಿನ ಗುಣಮಟ್ಟ ಪರೀಕ್ಷಾ ವ್ಯವಸ್ಥೆಯನ್ನು ಪರಿಶೀಲಿಸಿದರು.

ಸರ್ಕಾರದ ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಹಾಗೂ ಕಾಲಮಿತಿಯೊಳಗೆ ಪೂರ್ಣಗೊಳಿಸಿ, ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೂಚಿಸಿದರು.

ಭೇಟಿ ಸಂದರ್ಭದಲ್ಲಿ ಜಮಖಂಡಿ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಿಕಾರ್ಜುನ ಬಡಿಗೇರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಪಂಚಾಳ, ಪಂಚಾಯತ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಸಂಜೀವ ಹಿಪ್ಪರಗಿ ಸೇರಿದಂತೆ ಇತರರು ಇದ್ದರು.

ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ: ಬಿತ್ತನೆಗೆ ಕ್ರಿಯಾ ಯೋಜನೆ ರೂಪಿಸಿಕೊಳ್ಳಿ -ಪಂಕಜ ಕುಮಾರ ಪಾಂಡೆ

ಕಲಬುರಗಿ,ಜು,05-

ಪ್ರಸ್ತುತ ಮುಂಗಾರು ಋತುವಿನಲ್ಲಿ ಇದೂವರೆಗೆ ಬಿತ್ತನೆಗೆ ಪೂರಕವಾಗಿ ಮಳೆ ಬಾರದ ಕಾರಣ ಬರದ ಛಾಯೆ ಆವರಿಸಿದ್ದು, ಮುಂದಿನ ದಿನದಲ್ಲಿ ಮಳೆಯ ಆಶಾಭಾವನೆ ಹೊಂದಿ ಬಿತ್ತನೆಗೆ ಪೂರಕವಾಗಿ ಕ್ರಿಯಾ ಯೋಜನೆ ರೂಪಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಡಳಿತ) ಸರ್ಕಾರದ ಕಾರ್ಯದರ್ಶಿ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರ ಕಾರ್ಯದರ್ಶಿ ಪಂಕಜ ಕುಮಾರ ಪಾಂಡೆ ತಿಳಿಸಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ವಿವಿಧ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಬಿತ್ತನೆಗೆ ಪೂರಕವಾಗಿ ಬೀಜ ಮತ್ತು ರಸಗೊಬ್ಬರ ಕೊರತೆಯಾಗದಂತೆ ಅಧಿಕಾರಿಗಳು ಅಗತ್ಯ ಪ್ರಮಾಣದಲ್ಲಿ ದಾಸ್ತಾನು ಮಾಡಿಕೊಳ್ಳುವಂತೆಯೂ ಸೂಚಿಸಿದರು. ಕೃಷಿ ಮತ್ತು ತೋಟಗಾರಿಕೆ ಅಧಿಕಾರಿಗಳು ಹಳ್ಳಿಗೆ ಭೇಟಿ ನೀಡಿ ರೈತರ ಅಹವಾಲು ಆಲಿಸಬೇಕು. ಮಳೆ ಇಲ್ಲದ ಕಾರಣ ಕಂಗಾಲಿಗಿರುವ ರೈತರಿಗೆ ಧೈರ್ಯ ತುಂಬುವಂತಹ ಕೆಲಸವಾಗಬೇಕು. ಮಾರುಕಟ್ಟೆಯಲ್ಲಿ ಬೀಜ, ರಸಗೊಬ್ಬರ ಕೃತಕ ಅಭಾವ ಸೃಷ್ಠಿಯಾಗದಂತೆ ನೋಡಿಕೊಳ್ಳಬೇಕು ಎಂದು ಪಂಕಜ್ ಕುಮಾರ ಪಾಂಡೆ ನಿರ್ದೇಶನ ನೀಡಿದರು.

ಜಿಲ್ಲೆಯ ವಿವಿಧ ಜಲಾಶಯಗಳ ಸ್ಥಿತಿಗತಿ ಅವಲೋಕಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಮುಂದಿನ ದಿನದಲ್ಲಿ ಮಳೆ ಬಾರದೆ ಹೋದಲ್ಲಿ ಕುಡಿಯುವ ನೀರಿಗೆ ಪರ್ಯಾಯ ವ್ಯವಸ್ಥೆ ಸಹ ಮಾಡಿಟ್ಟುಕೊಳ್ಳಬೇಕು. ಬಾವಿ, ಕೊಳವೆ ಬಾವಿ ಜಲಮೂಲಗಳ ನೆರವಿನಿಂದ ನೀರು ಪೂರೈಕೆ ಮಾಡಬೇಕು. ಕಲಬುರಗಿ ನಗರಕ್ಕೆ ನೀರು ಪೂರೈಕೆಗೆ ನಾರಾಯಣಪುರ ಜಲಾಶಯದಿಂದ ನೀರು ಹರಿಸಬೇಕು. ಜನ ಮತ್ತು ಜಾನುವಾರುಗಳಿಗೆ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆ



ಯಾಗದಂತೆ ನೋಡಿಕೊಳ್ಳಬೇಕು. ಜಾನುವಾರುಗಳಿಗೆ ಬೇಕಾದ ಮೇವು ಸಹ ದಾಸ್ತಾನು ಮಾಡಬೇಕು. ಕಲಬುರಗಿ ನಗರದ ಕುಡಿಯುವ ನೀರಿನ ಸಮಸ್ಯೆ ಇದ್ದ ಕಡೆ ಟ್ಯಾಂಕರ್ ಮೂಲಕ ಪೂರೈಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸೂಚನೆ ಕೊಟ್ಟರು.

ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಮಾತನಾಡಿ ನಗರದ ಜನತೆಗೆ ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕೆ ನಾರಾಯಣಪುರ ಜಲಾಶಯದಿಂದ ನೀರು ತರುವ ಪೈಪ್ ಲೈನ್ ಕಾಮಗಾರಿಯ 1,850 ಕೋಟಿ ರೂ. ಮೊತ್ತದ ಯೋಜನೆ ಡಿ.ಪಿ.ಆರ್ ಸಿದ್ಧವಾಗಿದೆ. ಪ್ರಸಕ್ತ ನಗರದಲ್ಲಿ ನೀರಿನ ಸಮಸ್ಯೆ ಇದ್ದ ವಾರ್ಡ್ ನಲ್ಲಿ ಪ್ರತಿ ದಿನ 160 ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ ಜಿಲ್ಲೆಯಾದ್ಯಂತ 80,840 ಹೆಕ್ಟೇರ್ ನೀರಾವರಿ ಮತ್ತು 8,09,793 ಹೆಕ್ಟೇರ್ ಮಳೆಯಾಶ್ರಿತ ಪ್ರದೇಶದಲ್ಲಿ ಪ್ರಸಕ್ತ ಖಾರೀಫ್ ನಲ್ಲಿ ಬಿತ್ತನೆ ಗುರಿ ಹೊದಲಾಗಿದ್ದರು, ಮಳೆ ಕೊರತೆಯಿಂದ ಕೇವಲ ಶೇ.30ರಷ್ಟು ಪ್ರದೇಶದಲ್ಲಿ ಮಾತ್ರ ಬಿತ್ತನೆ ಮಾಡಲಾಗಿದೆ. ಜಿಲ್ಲೆಯ ಹಲವು ತಾಲೂಕಿನಲ್ಲಿ ಬಿತ್ತನೆಗೆ ಬೇಕಾದ ಮಳೆ ಇನ್ನು ಬಂದಿಲ್ಲ. ಭತ್ತ, ಉದ್ದು, ತೊಗರಿ, ಹೆಸರು, ಸೋಯಾ ಅವರೆ, ಮೆಕ್ಕೆಜೋಳ, ಸಜ್ಜೆ, ಸೂರ್ಯಕಾಂತಿ ಬೆಳೆಗಳ ಬಿತ್ತನೆಗೆ ಈಗಾಗಲೆ 20,301 ಕ್ವಿಂಟಾಲ್ ವಿತರಿಸಿದ್ದು, ಇನ್ನು 6,395 ಕ್ವಿಂಟಾಲ್ ದಾಸ್ತಾನಿದೆ. ಅದೇ ರೀತಿ 45,935 ಮೆಟ್ರಿಕ್ ಟನ್ ರಸಗೊಬ್ಬರ ವಿತರಿಸಿದ್ದು, 33,725 ಮೆ.ಟನ್ ಇನ್ನು ಸ್ಟಾಕ್ ಇದೆ ಎಂದರು.

ಇನ್ನು ಡಿ.ಎ.ಪಿ ಸೇರಿದಂತೆ ಎಲ್ಲಾ ರೀತಿಯ ರಸಗೊಬ್ಬರ ಅನ್ಯ ರಾಜ್ಯಕ್ಕೆ ಮಾರಾಟವಾಗದಂತೆ ಜಿಲ್ಲೆಯ ಗಡಿ ಚೆಕ್ ಪೋಸ್ಟ್ ನಲ್ಲಿಯೂ ನಿಗಾ ವಹಿಸಿದೆ. ಮಾರುಕಟ್ಟೆಯಲ್ಲಿ ರೈತರಿಗೆ ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟವಾಗದಂತೆ ಅಧಿಕಾರಿಗಳ ತಂಡ ಸತತವಾಗಿ ಕೃಷಿ ಪರಿಕರ ಅಂಗಡಿಗಳ ಮೇಲೆ ದಾಳಿ ಮಾಡಿ ಪರಿಶೀಲಿಸಲಾಗುತ್ತಿದೆ. ಇದೂವರೆಗೆ 168 ಅಂಗಡಿಗಳ ಮೇಲೆ ದಾಳಿ ಮಾಡಿ 51 ಅಂಗಡಿಗೆ ನೋಟಿಸ್ ನೀಡಿದಲ್ಲದೆ ನಿಯಮ ಉಲ್ಲಂಘಿಸಿದ 4 ಅಂಗಡಿಗಳ ಪರವಾನಿಗೆ ರದ್ದುಪಡಿಸಿದೆ ಎಂದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಮಾತನಾಡಿ ಕಂದಾಯ ಇಲಾಖೆಯ ಪ್ರಗತಿ ವಿವರಿಸುತ್ತಾ, ಭೂ ಸುರಕ್ಷಾ ಅಯೋಜನೆಯಡಿ ಎಲ್ಲಾ 11 ತಾಲೂಕಿನ ಕಂದಾಯ ದಾಖಲೆಗಳು ಗಣಕೀಕರಣ ಮಾಡಿದ್ದು, ಸಾರ್ವಜನಿಕರಿಗೆ ಗಣಕೀಕೃತ ದಾಖಲೆ ನೀಡಲಾಗುತ್ತಿದೆ. ಕಂದಾಯ ನ್ಯಾಯಲಯದ ಮೂಲಕ ಪ್ರಕರಣದ ವಿಲೇವಾರಿ ತ್ವರಿತಗೊಳಿಸಿದೆ. ಪಹಣಿಗೆ ಆಧಾರ್ ಸೀಡಿಂಗ್ ಕಾರ್ಯ ಶೇ.84.87 ರಷ್ಟು ಪೂರ್ಣಗೊಳಿಸಿದೆ. ಲ್ಯಾಂಡ್ ಬೀಟ್ ಕಾರ್ಯಕ್ರಮದಡಿ 43,061 ಸರ್ಕಾರಿ ಜಮೀನುಗಳನ್ನು ಗುರುತಿಸಿ ಜಿಯೋ ಫೆನ್ಸಿಂಗ್ ಮಾಡಲಾಗಿದೆ ಎಂದರು. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಪಂಕಜ್ ಕುಮಾರ ಪಾಂಡೆ ಮಾತನಾಡಿ ಮುಂದಿನ ದಿನದಲ್ಲಿ ಎ.ಐ. ತಂತ್ರಜ್ಞಾನ ಬಳಸಿ ಸ್ಯಾಟಲೈಟ್ ಫೋಟೊ ನೆರವಿನಿಂದ ಸರ್ಕಾರಿ ಜಮೀನು ಒತ್ತುವರಿಯಾದಲ್ಲಿ ಕೂಡಲೆ ಸಂಬಂಧಪಟ್ಟ ಇಲಾಖೆಗೆ ಮಾಹಿತಿ ನೀಡುವ ಕಾರ್ಯಕ್ರಮ ರಾಜ್ಯ ಸರ್ಕಾರ ಹಮ್ಮಿಕೊಳ್ಳುತ್ತಿದ್ದು, ಅದಕ್ಕೆ ಇದೂ ಪೂರಕವಾಗಲಿದೆ ಶೇ.100ರಷ್ಟು ಇದರಲ್ಲಿ ಪ್ರಗತಿ ಸಾಧಿಸಿ ಎಂದರು. ಕಲಬುರಗಿ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಗಳಿರುವುದರಿಂದ ಇದರ ಪ್ರಯೋಜನ ಪಡೆದುಕೊಂಡು ಹೆಚ್ಚಿನ ಕೈಗಾರಿಕೆ ಹೂಡಿಕೆಗೆ ಲ್ಯಾಂಡ್ ಬ್ಯಾಂಕ್ ಗುರುತಿಸಿಡಬೇಕು. ಇಲ್ಲಿ ವಿಮಾನ ನಿಲ್ದಾಣ ಇದೆ, ಸೂರತ್-ಚೆನ್ನೈ ಕಾರಿಡಾರ್ ಬರುತ್ತಿದೆ. ಎನ್.ಹೆಚ್ ಗಳಿವೆ. ಇವೆಲ್ಲದರ ಪ್ರಯೋಜನ ಪಡೆಯಬೇಕು. ಇನ್ನು ಕೈಗಾರಿಕೆಗಳಿಗೆ ಸಂಸ್ಕರಣ ನೀರು ಬಳಸಿದಲ್ಲಿ ಕೈಗಾರಿಕೆಗಳಿಗೆ ನೀರಿನ ಮಸ್ಯೆ ಸಹ ತಲೆದೋರದು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಪಂಕಜ್ ಕುಮಾರ ಪಾಂಡೆ ಅವರು ಕೃಷಿ ಇಲಾಖೆಯ ಪ್ರಧಾನಮಂತ್ರಿ ಫಸಲ್‌ಬಿಮಾ ಯೋಜನೆಯ ಪೋಸ್ಟರ್ ಬಿಡುಗಡೆಗೊಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನೂರ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಸಹಾಯಕ ಆಯುಕ್ತರಾದ ಸಾಹಿತ್ಯ ಆಲದಕಟ್ಟಿ, ಪ್ರಭುರೆಡ್ಡಿ, ತೋಟಗಾರಿಕೆ ಜಂಟಿ ನಿರ್ದೇಶಕ ಸಂತೋಷ ಇನಾಂದಾರ, ಡಿ.ಡಿ.ಪಿ.ಐ ಶಂಕ್ರಮ್ಮ ಢವಳಗಿ, ಡಿ.ಎಚ್.ಓ ಡಾ.ಶರಣಬಸಪ್ಪ ಕ್ಯಾತನಾಳ, ಡಿ.ಐ.ಸಿ ಜಂಟಿ ನಿರ್ದೇಶಕ ಅಬ್ದುಲ್ ಅಜೀಮ್, ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಸಂಜಯ್ ರೆಡ್ಡಿ, ಸಣ್ಣ ನೀರಾವರಿ, ಕೆ.ಎನ್.ಎನ್.ಎಲ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

ಒಂದನೇಯ ಪುಟದಿಂದ

ಸಂಪುಟದಲ್ಲಿ ಯುವಕರಿಗೆ ಅವಕಾಶ ನೀಡುವ ಆಸೆ ಇದೆ, ಆದರೆ ಅಂತಿಮ ನಿರ್ಧಾರ ಹೈಕಮಾಂಡ್ ತೆಗೆದುಕೊಳ್ಳುತ್ತೆ : ಡಿಕೆಶಿ

ಅಭಿಲಾಶೆಗಳಿರುತ್ತವೆ. ತಮಗೂ ಕೂಡ ಹೊಸಬರಿಗೆ ಅವಕಾಶ ನೀಡಬೇಕೆಂಬ ಆಸೆ ಇದೆ. ಆದರೆ ಸಂಪುಟದಲ್ಲಿ ಖಾಲಿಯಿರುವುದು 20 ಸ್ಥಾನಗಳು. ಹೈಕಮಾಂಡ್ ಜಾತಿ, ಜಿಲ್ಲೆಗಳನ್ನು ಗಮನದಲ್ಲಿಟ್ಟುಕೊಂಡು ಸಚಿವರನ್ನು ಆಯ್ಕೆ ಮಾಡುತ್ತದೆ ಎಂದು ಹೇಳಿದರು.

ಹುನಗುಂದ ಕ್ಷೇತ್ರಕ್ಕೆ ಬೃಹತ್ ನೀರಾವರಿ ಯೋಜನೆಯನ್ನು ಮಂಜೂರು ಮಾಡಲಾಗಿದೆ. ಮಧ್ಯಪ್ರದೇಶದ ಮಾದರಿಯಲ್ಲಿ ನೀರಾವರಿ ಯೋಜನೆಗಳನ್ನು ಜಾರಿಗೊಳಿಸಬೇಕೆಂದು ಕ್ಷೇತ್ರದ ಕಾಂಗ್ರೆಸ್ ಮುಖಂಡರು ಮನವಿ ಮಾಡಿದ್ದಾರೆ. ಈ ಬಗ್ಗೆ ತಾವು ಪರಿಶೀಲಿಸುವುದಾಗಿ ಹೇಳಿದರು.

ವಿಜಯಾನಂದ ಕಾಶಪ್ಪನವರ್ ಅವರ ಜನಪ್ರಿಯತೆ, ಹೋರಾಟ, ಸಂಘಟನಾ ಸಾಮರ್ಥ್ಯ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ನಾಯಕತ್ವದ ಬಗ್ಗೆ ತಮಗೆ ಅರಿವಿದೆ ಎಂದರು.

ಕಾರ್ಯಕರ್ತರ ಭಾವನೆಗಳನ್ನು ಹೈಕಮಾಂಡ್‌ಗೆ ತಿಳಿಸುತ್ತೇನೆ. ಆದರೆ ಮುಂದಿನ ದಿನಗಳಲ್ಲಿ ಸಚಿವ ಸ್ಥಾನಕ್ಕಾಗಿ ಈ ರೀತಿಯ ನಿಯೋಗಗಳು ಬರುವುದು ಬೇಡ ಎಂದು ತಿಳಿಸಿದರು.

ಸಿಸಿ ರಸ್ತೆ - ದೇವಸ್ಥಾನ ನಿರ್ಮಾಣಕ್ಕೆ ಮಾಜಿ ಸಚಿವರು - ಹಾಲಿ ಶಾಸಕರಿಂದ ಪೂಜೆ ಭಕ್ತರ ಅನುಕೂಲವಾಗುವಂತೆ ಗುಣಮಟ್ಟದ ಕಾಮಗಾರಿಯಾಗಬೇಕು

ವೈ.ಶರಣಪ್ಪ ನಾಯಕ ಗುಡದಿನ್ನಿ, ಶಿವಪ್ಪಗೌಡ ಹಳ್ಳಿಹೊಸೂರು, ಎಂ.ಶ್ರೀನಿವಾಸ, ದಾನನಗೌಡ, ರುದ್ರಪ್ಪ ಅಂಗಡಿ, ಹಳ್ಳಪ್ಪಗೌಡ ಮಾಡಗಿರಿ, ಜಯಪ್ಪಗೌಡ ಮಾಡಗಿರಿ, ತಿಮ್ಮಪ್ಪ ಹಳ್ಳಿಹೊಸೂರು, ಶಿವಪ್ಪಗೌಡ ಅತ್ತನೂರು, ಜಯವಂತ, ಶರಣಪ್ಪ, ಲವ, ಚಿನ್ನಪ್ಪ, ಬಾಲಪ್ಪ ಹಳ್ಳಿಹೊಸೂರು. ಸಾಬಗೌಡ ನಾಯಕ, ಕೆಆರ್‌ಐಡಿಎಲ್ ಎಂಜಿನಿಯರ್ ರಾಘವೇಂದ್ರ, ಇದ್ದರು.

ಬಾಲಕಾರ್ಮಿಕ ನಿರ್ಮೂಲನೆಗೆ ದಿಟ್ಟ ಹೆಜ್ಜೆ; ಜಾಗೃತಿ ಪೋಸ್ಟರ್ ಬಿಡುಗಡೆ -ಶಿವಾನಂದ ಭಜಂತ್ರಿ

ಸಾರ್ವಜನಿಕರ ಜವಾಬ್ದಾರಿಗಳ ಕುರಿತು ವ್ಯಾಪಕ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಶರಣಬಸಪ್ಪ, ಕಾರ್ಮಿಕ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಾದ ಅಂಬರೀಶ್, ಬಸವರಾಜ್, ವಿಜಯಕುಮಾರ್, ಇಲಿಯಾಸ್ ಮಿಯಾ, ರಜಿಯಾ ಬೇಗಂ ಸೇರಿದಂತೆ ಹಲವರು ಉಪಸ್ಥಿತರಿದ್ದರು

ಜಿಲ್ಲಾ ಖಜಾನೆ ಉಪನಿರ್ದೇಶಕರ ವಿರುದ್ಧ ಕ್ರಮಕ್ಕೆ ಒತ್ತಾಯ

ಅನುಮಾನ ಉಂಟಾಗಿದೆ.ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಜಿಲ್ಲಾ ಖಜಾನೆ ಇಲಾಖೆ ಉಪನಿರ್ದೇಶಕರು ಸಿದ್ದರಾಮೇಶ್ವರ ವಿ.ಟಿ. ರವರ ಮೇಲೆ ಇಲಾಖೆಗೆ ಸಂಬಂಧಿಸಿದಂತೆ ಸೂಕ್ತ ತನಿಖೆ ನಡೆಸಿ, ತಪ್ಪಿತಸ್ಥರೆಂದು ಕಂಡುಬಂದಲ್ಲಿ ಅವರ ಮೇಲೆ ಸೂಕ್ತ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮಾರುತಿ ಚಿಕ್ಕಸೂಗೂರು, ಮಧು ಕಾಂತ್ ಸೇರಿದಂತೆ ಉಪಸ್ಥಿತರಿದ್ದರು.

ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಾಶಕ ದದ್ದಲ ಚಾಲನೆ

2018ರಿಂದ ಈ ಭಾಗದ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗಿದ್ದು, ಸ್ಥಗಿತಗೊಂಡಿದ್ದ ಸೇತುವೆ ಕಾಮಗಾರಿಗಳಿಗೆ ಮರುಜೀವ ನೀಡಲಾಗಿದೆ. ಕುರ್ವಾಕಲ್ ಸೇತುವೆಗೆ ಹೆಚ್ಚುವರಿ 24 ಕೋಟಿ ರೂ. ಮಂಜೂರಾಗಿದ್ದು, ಕುರ್ವಾ ಕುರ್ದ ಸೇತುವೆಗೆ ಹೆಚ್ಚುವರಿ 14 ಕೋಟಿ ರೂ. ವೆಚ್ಚದ ಪರಿಷ್ಕೃತ ಅಂದಾಜು ಅನುಮೋದನೆ ದೊರೆತಿದೆ. ಈ ಎರಡೂ ಸೇತುವೆಗಳ ಕಾಮಗಾರಿ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಉದ್ಘಾಟನೆ ನಡೆಯಲಿದೆ ಎಂದು ಹೇಳಿದರು.

ನಾರದಗಡ್ಡ ಸೇತುವೆ ನಿರ್ಮಾಣಕ್ಕೆ ಪಿಡಬ್ಲ್ಯೂಡಿ ಇಲಾಖೆಯಿಂದ 20 ಕೋಟಿ ರೂ. ಹಾಗೂ ಜಿಲ್ಲಾಡಳಿತದಿಂದ 20 ಕೋಟಿ ರೂ. ಸೇರಿದಂತೆ ಒಟ್ಟು 40 ಕೋಟಿ ರೂ. ವೆಚ್ಚದ ಯೋಜನೆ ರೂಪಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಆರಂಭವಾಗಿದೆ. ಕಾಮಗಾರಿ ಶೀಘ್ರ ಆರಂಭವಾಗಲಿದೆ ಎಂದು ತಿಳಿಸಿದರು.

ಈ ಪ್ರದೇಶವನ್ನು ಪ್ರಮುಖ ಪ್ರವಾಸೋದ್ಯಮ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಮೊಸಳೆ ಪಾರ್ಕ್, ಭಕ್ತರಿಗೆ ಮೆಟ್ಟಿಲು ವ್ಯವಸ್ಥೆ, ವಸತಿ ಸೌಲಭ್ಯಗಳು ಹಾಗೂ ಮೂಲಸೌಕರ್ಯಗಳನ್ನು ಕಲ್ಪಿಸಲು ಯೋಜನೆ ರೂಪಿಸಲಾಗಿದೆ. ಕೇಂದ್ರ ಸರ್ಕಾರದ ಪ್ರಸಾದ್ ಯೋಜನೆಯಡಿ ಅಭಿವೃದ್ಧಿ ಕಾಮಗಾರಿಗಳಿಗೆ ವಿವರವಾದ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲಾಗಿದ್ದು, ಅದನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಹೇಳಿದರು.

ಪ್ರವಾಸೋದ್ಯಮ ಅಭಿವೃದ್ಧಿಯಾದರೆ ಸ್ಥಳೀಯ ರೈತರು, ಹೋಟೆಲ್‌ಗಳು, ಸಣ್ಣ ವ್ಯಾಪಾರಿಗಳು ಹಾಗೂ ಸಾರಿಗೆ ಸೇವೆಗಳನ್ನು ಅವಲಂಬಿಸಿರುವ ಕುಟುಂಬಗಳಿಗೆ ಆರ್ಥಿಕ ಚಟುವಟಿಕೆಗಳು ಹೆಚ್ಚಾಗಿ ಜೀವನೋಪಾಯ ಸುಧಾರಣೆಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಮಳೆ ಕೊರತೆಯಿಂದ ಜಿಲ್ಲೆಯ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಈಗಾಗಲೇ ಹಲವೆಡೆ ಮರುಬಿತ್ತನೆ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಜಿಲ್ಲಾಡಳಿತ ವರದಿ ಸಲ್ಲಿಸಿದ ಬಳಿಕ ಅಗತ್ಯವಿದ್ದಲ್ಲಿ ಬರ ಪರಿಸ್ಥಿತಿ ಘೋಷಿಸುವ ಕುರಿತು ಸರ್ಕಾರ ನಿರ್ಧಾರ ಕೈಗೊಳ್ಳಲಿದೆ ಎಂದು ಹೇಳಿದರು.

ರೈತರು ಬೆಳೆ ವಿಮೆ ಮಾಡಿಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದ್ದು, ಜುಲೈ 15ರವರೆಗೆ ಅವಕಾಶ ಇರುವುದರಿಂದ ಪ್ರತಿಯೊಬ್ಬ ರೈತರೂ ವಿಮೆ ಸೌಲಭ್ಯವನ್ನು ಬಳಸಿಕೊಳ್ಳಬೇಕು. ಬರ ಪರಿಸ್ಥಿತಿ ಘೋಷಣೆಯಾದರೆ ವಿಮೆ ಪರಿಹಾರ ಪಡೆಯಲು ಇದು ನೆರವಾಗಲಿದೆ ಎಂದು ಮನವಿ ಮಾಡಿದರು.

ಇದಕ್ಕೂ ಮುನ್ನ ಅವರು ಕಡಗಂದೊಡ್ಡಿ ಗ್ರಾಮದಲ್ಲಿ ನೂತನ ಬಸ್ ಸೇವೆಗೆ ಚಾಲನೆ ನೀಡಿದರು. ಬಳಿಕ ಚಂದ್ರಬಂಡಾ ಗ್ರಾಮದ ಡಿ. ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದರು.

ಜುರಾಲ ಯೋಜನೆಯಡಿ ಡಿ. ರಾಂಪುರ ಹಾಗೂ ಆತ್ಕೂರು ಸಮೀಪ ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಾಣವಾಗುತ್ತಿರುವ ಸೇತುವೆ ಕಾಮಗಾರಿಗಳನ್ನು ಪರಿಶೀಲಿಸಿ ಪ್ರಗತಿ ಮಾಹಿತಿ ಪಡೆದುಕೊಂಡರು. ನಬಾರ್ಡ್ ಯೋಜನೆಯಡಿ ಕೃಷಿ ಸಂಪರ್ಕ ಕೇಂದ್ರ ನಿರ್ಮಾಣ ಕಾಮಗಾರಿಯನ್ನು ವೀಕ್ಷಿಸಿ, ಗುಣಮಟ್ಟ ಕಾಪಾಡಿಕೊಂಡು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಿಮಿಸಲವಾಡ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಆರು ಕೊಠಡಿಗಳು ಹಾಗೂ ಸರ್ಕಾರಿ ಪ್ರೌಢಶಾಲೆಗೆ ಏಳು ಕೊಠಡಿಗಳ ನಿರ್ಮಾಣ ಕಾಮಗಾರಿಗಳನ್ನು ಪರಿಶೀಲಿಸಿ, ವಿದ್ಯಾರ್ಥಿಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಿಎಂಐಡಿಪಿ ಯೋಜನೆಯಡಿ ಯಾಪಲದಿನ್ನಿ ಅಪ್ಪನದೊಡ್ಡಿ ರಸ್ತೆ ನಿರ್ಮಾಣ ಕಾಮಗಾರಿಯನ್ನೂ ಪರಿಶೀಲಿಸಿ, ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ನಾಗೇಂದ್ರಪ್ಪ ಮಟಮಾರಿ, ಚನ್ನಬಸವ ನಾಯಕ, ಬಸೀರ್ ಅಹ್ಮದ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.



ಜಿಲ್ಲಾ ಕುರುಬರ ಸಂಘದ ಕಚೇರಿ ಉದ್ಘಾಟನೆ

ರಾಯಚೂರು, ಜು.5-ಜಿಲ್ಲಾ ಕುರುಬರ ಸಂಘದ ಕಚೇರಿಯನ್ನು ಕೊಪ್ಪಳ ಮಾಜಿ ಸಂಸದರಾದ ಕೆ. ವಿರೂಪಾಕ್ಷಪ್ಪ ಸಿಂಧನೂರು ಇವರು ಉದ್ಘಾಟಿಸಿದರು. ಸಾನಿಧ್ಯವನ್ನು ಸಿದ್ದಯ್ಯ ತಾತ ಗುರುವಿನ, ಲಕ್ಷ್ಮಣತಾತ ಗಾಣಧಾಳ ವಹಿಸಿದ್ದರು. ಅಧ್ಯಕ್ಷತೆಯನ್ನು ಜಿಲ್ಲಾ ಕುರುಬರ ಸಂಘದ ಅಧ್ಯಕ್ಷರಾದ ಗುಂಡಪ್ಪ ಸಾಹುಕಾರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸಮಾಜದ ಮುಖಂಡರಾದ ಕೆ. ಪಂಪಾಪತಿ, ಕುರುಬ ಸಂಘದ ರಾಜ ನಿರ್ದೇಶಕ ಮಹದೇವಪ್ಪ ಮಿರ್ಜಾಪುರ, ಜಿಲ್ಲಾ ಪದಾಧಿಕಾರಿಗಳಾದ ಹನುಮಂತಪ್ಪ ಜಾಲಬೆಂಚಿ, ನಾಗರಾಜ್ ಮಡ್ಡಿಪೇಟೆ, ಡಿ.ಜಿ. ಯಶವಂತ್,ಹನುಮಂತಪ್ಪ ವಕೀಲರು, ವೆಂಕನಗೌಡ ಬೊಮ್ಮನಾಳ, ಬಾಬು ಬರಮಣ್ಣನವರ್, ರಂಗಾರೆಡ್ಡಿ, ತಾಲೂಕ ಅಧ್ಯಕ್ಷರಾದ ರಾಮನಗೌಡ ವಕೀಲರು, ಆಂಜನೇಯ ವಕೀಲರು ಯಾಪಲದಿನ್ನಿ, ಶಂಕರ್ ಪಾಟೀಲ್, ಅಂಬರೀಶ್ ಗಧಾರ, ತಿನ್ನಿಪರಾಧಿಕಾರಿಗಳಾದ ಎಸ್. ರಾಮಣ್ಣ, ಜಯರಾಜ್, ನಾಗರಾಜ್ ಬೇವಿನ, ಮಹದೇವ ಗಂಗವಾರ, ನಾಗರಾಧ್ಯಕ್ಷರಾದ ಶೇಖರ್ ವಾರದ, ಸಮಾಜದ ಮುಖಂಡರಾದ ಬೀರಪ್ಪ ಕಡದಿನ್ನಿ, ನಾಗೇಂದ್ರಪ್ಪ ಮಟಮಾರಿ, ನರಸಿಂಹಲು ಮಾಸದೊಡ್ಡಿ, ಶ್ರೀನಿವಾಸ್ ಏಗನೂರು, ರಂಜಿತ್ ಹೀರಾ, ಜಗದೀಶ್, ಬಸವರಾಜ ಪೂಜಾರಿ ಮುಂತಾದವರು ಉಪಸ್ಥಿತರಿದ್ದರು.

ಬಳ್ಳಾರಿಯಲ್ಲಿ ವನಮಹೋತ್ಸವ ಅಂಗವಾಗಿ 'ಗ್ರೀನ್ ಮಾರ್ಚ್'

ಪರಿಸರ ಕಾಳಜಿ ಕೇವಲ ಒಂದು ದಿನಕ್ಕೆ ಸೀಮಿತ ಬೇಡ: ಎಸ್ಪಿ ಡಾ. ಸುಮನ್ ಡಿ. ಪೆನ್ನೇಕರ್

ಬಳ್ಳಾರಿ,ಜು.05-

ಪರಿಸರ ಸಂರಕ್ಷಣೆ, ಮರಗಳನ್ನು ಬೆಳೆಸುವುದು ಕೇವಲ ವರ್ಷಕ್ಕೊಮ್ಮೆ ಮಾಡುವ ಸಾಂಕೇತಿಕ ಆಚರಣೆಯಾಗಬಾರದು. ಬದಲಿಗೆ ಅದು ನಮ್ಮ ದೈನಂದಿನ ಜೀವನಶೈಲಿಯಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಕರೆ ನೀಡಿದರು.

ವನಮಹೋತ್ಸವ 2026 ರ ಅಂಗವಾಗಿ ಬಳ್ಳಾರಿ ಪ್ರಾದೇಶಿಕ ಅರಣ್ಯ ವಿಭಾಗದ ವತಿಯಿಂದ ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ನಗರದ ರೇಡಿಯೋ ಪಾರ್ಕ್ ಬಳಿಯ ಪ್ರಾದೇಶಿಕ ಅರಣ್ಯ ವಿಭಾಗ ಕಚೇರಿ ಆವರಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ಗ್ರೀನ್ ಮಾರ್ಚ್' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಳ್ಳಾರಿಯಲ್ಲಿ ದಿನದಿಂದ ದಿನಕ್ಕೆ ತಾಪಮಾನವು ಗಣನೀಯವಾಗಿ ಹೆಚ್ಚಾಗುತ್ತಿದೆ. ಇದಕ್ಕೆ ಹಸಿರು ಕ್ರಾಂತಿಯೊಂದೇ ಸೂಕ್ತ ಪರಿಹಾರ. ನಾವು ಎಷ್ಟು ಹೆಚ್ಚು ಮರ-ಗಿಡಗಳನ್ನು ನೆಟ್ಟು ಪೋಷಿಸುತ್ತೇವೆಯೋ, ಅಷ್ಟು ಹಿತಕರವಾದ ವಾತಾವರಣವನ್ನು ನಮ್ಮ ಮುಂದಿನ ಪೀಳಿಗೆಗೆ ನೀಡಬಹುದು ಎಂದು ತಿಳಿಸಿದರು.

ಗಿಡಗಳನ್ನು ನೆಡುವ ಪ್ರಕ್ರಿಯೆಯಲ್ಲಿ ಮಕ್ಕಳ ಪಾತ್ರ ದೊಡ್ಡದಿದೆ. ಮಕ್ಕಳ ಬೆಳವಣಿಗೆಯ ಜೊತೆ ಜೊತೆಗೆ ಅವರು ನೆಟ್ಟ ಸಸಿಗಳು ಬೆಳೆಯುವುದನ್ನು ನೋಡುವುದೇ ಒಂದು ಸಂಭ್ರಮ. ನಮ್ಮ ಶಾಲಾ ದಿನಗಳಲ್ಲಿ ಸಸಿಗಳನ್ನು ನೆಟ್ಟು, ಅವುಗಳ ಬೆಳವಣಿಗೆಯನ್ನು ಪ್ರಾಯೋಗಿಕವಾಗಿ ದಾಖಲಿಸುವ ಚಟುವಟಿಕೆಗಳಿದ್ದವು. ಇಂತಹ ಹವ್ಯಾಸಗಳು ಇಂದಿನ ಮಕ್ಕಳಿಗೂ ಅತ್ಯಗತ್ಯ ಎಂದರು.

ಪ್ರತಿ ವರ್ಷ ಅರಣ್ಯ ಇಲಾಖೆಯು ಸಸಿಗಳನ್ನು ನೆಡುವ ಇಂತಹ ಹತ್ತಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ. ಪ್ರತಿಯೊಬ್ಬ ನಾಗರಿಕನೂ ಕೇವಲ ಸಸಿ ನೆಡುವುದಷ್ಟೇ ಅಲ್ಲದೆ, ಅದನ್ನು ಹೆಮ್ಮರವಾಗಿಸುವವರೆಗೆ ಪೋಷಿಸುವ ಜವಾಬ್ದಾರಿ ಹೊರಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಪರಿಸರ ಇದ್ದರೆ ನಾವು ಇರುತ್ತೇವೆ, ಪರಿಸರ ಇಲ್ಲದಿದ್ದರೆ ನಮ್ಮ ಅಸ್ತಿತ್ವವೇ ಇರಲ್ಲ, ಸುಸ್ಥಿರ ಅಭಿವೃದ್ಧಿಯ ಹಾದಿಯಲ್ಲಿ ಸಾಗಿದರೆ ಮಾತ್ರ ನಮ್ಮ ಭವಿಷ್ಯ ಚೆನ್ನಾಗಿರಲು ಸಾಧ್ಯ. ಇದಕ್ಕಾಗಿ ಯುವ ಪೀಳಿಗೆಯು ಅರಣ್ಯೀಕರಣ, ಸಾಮಾಜಿಕ ಅರಣ್ಯೀಕರಣ ಹಾಗೂ ಸಸಿ ನೆಡುವ ಕಾರ್ಯಕ್ರಮಗಳಿಗೆ ನಿರಂತರ ಬೆಂಬಲ ನೀಡಬೇಕು ಎಂದು ಆಶಿಸಿದರು.

★ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಜಾಗೃತಿ:★

ವಿದ್ಯಾರ್ಥಿಗಳು ನೀವಿನ್ನೂ ವೋಟ್ ಮಾಡದೇ ಇರಬಹುದು, ಆದರೆ ಎಸ್‌ಐಆರ್ ಬಗ್ಗೆ ಜಾಗೃತಿ ಇರಬೇಕು. ನಿಮ್ಮ ಕುಟುಂಬದ ಸದಸ್ಯರ ಹೆಸರು ಹಳೆಯ ಮತದಾರರ ಪಟ್ಟಿಯಲ್ಲಿ ಎಲ್ಲಿದೆ ಎಂಬುದನ್ನು ಪರಿಶೀಲಿಸಿ, ಎನ್ಯೂಮರೇಷನ್ ಫಾರ್ಮ್ಸ್ ಹಾಗೂ ಪ್ರೊಜನಿ ಮ್ಯಾಪಿಂಗ್ ಪ್ರಕ್ರಿಯೆಗಳನ್ನು ಸರಿಯಾಗಿ ಭರ್ತಿ ಮಾಡಲು ಸಹಾಯ ಮಾಡಬೇಕು. ಒಂದು ವೇಳೆ ಈ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ತಪ್ಪುಗಳಾದರೆ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟು ಹೋಗುವ ಸಾಧ್ಯತೆ ಇರುತ್ತದೆ. ಇದರಿಂದಾಗಿ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳಿಂದಲೂ ವಂಚಿತರಾಗಬೇಕಾಗಬಹುದು ಎಂದು ಎಸ್‌ಐಆರ್ ಕುರಿತು ಯುವಕರಲ್ಲಿ ಜಾಗೃತಿ ಮೂಡಿಸಿದರು.


ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್ ಬಸವರಾಜ ಅವರು ಮಾತನಾಡಿ, ದೇಶಾದ್ಯಂತ ಜುಲೈ 1 ರಿಂದ 7 ನೇ ತಾರೀಖಿನವರೆಗೆ ವನಮಹೋತ್ಸವ ಸಪ್ತಾಹವನ್ನು ಆಚರಿಸಲಾಗುತ್ತಿದ್ದು, ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆ ಮತ್ತು ಹಸಿರನ್ನು ಹೆಚ್ಚಿಸುವ ಕುರಿತು ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಸಾಮಾನ್ಯವಾಗಿ ಜೂನ್ ಮೊದಲ ವಾರದಲ್ಲಿ ಕರ್ನಾಟಕಕ್ಕೆ ಮುಂಗಾರು ಪ್ರವೇಶಿಸಿದರೂ, ದೇಶಾದ್ಯಂತ ಸಂಪೂರ್ಣವಾಗಿ ಮಳೆಗಾಲ ಆರಂಭವಾಗುವುದು ಜೂನ್ ಅಂತ್ಯಕ್ಕೆ. ಈ ಹಿನ್ನೆಲೆಯಲ್ಲಿ, ಗಿಡಗಳನ್ನು ನೆಟ್ಟು ಪೋಷಿಸಲು ಜುಲೈ ಮೊದಲ ವಾರ ಅತ್ಯಂತ ಸೂಕ್ತವಾದ ಸಮಯವೆಂದು ಪರಿಗಣಿಸಿ ಈ ಸಪ್ತಾಹವನ್ನು ಆಚರಿಸಲಾಗುತ್ತದೆ. ಪ್ರಕೃತಿಯನ್ನು ಇಂದಿನ ಸ್ಥಿತಿಗಿಂತಲೂ ಉತ್ತಮ ರೀತಿಯಲ್ಲಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಬಳಿಕ ಗಣ್ಯರು 'ಗ್ರೀನ್ ಮಾರ್ಚ್' (ಪರಿಸರ ಜಾಥಾ) ಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಜಾಥಾವು ಪ್ರಾದೇಶಿಕ ಅರಣ್ಯ ವಿಭಾಗ ಕಚೇರಿ ಆವರಣದಿಂದ ಆರಂಭಗೊಂಡು, ಕೌಲ್ ಬಜಾರ್ ಮಾರ್ಗವಾಗಿ ಸಾಗಿ ಟಿ.ಬಿ. ಸಾನಿಟೋರಿಯಂ ಆವರಣದಲ್ಲಿ ಅಂತ್ಯಗೊಂಡಿತು. ಬಳಿಕ ಅಲ್ಲಿ ಸಸಿಗಳನ್ನು ನೆಡಲಾಯಿತು.

ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಡುವ ಮೂಲಕ ಪರಿಸರ ರಕ್ಷಣೆಯ ಸಂಕಲ್ಪ ಮಾಡಲಾಯಿತು ಹಾಗೂ ಜಾಥದಲ್ಲಿ ಭಾಗವಹಿಸಿದವರೆಲ್ಲರಿಗೂ ಸಸಿಗಳನ್ನು ವಿತರಿಸಲಾಯಿತು.

ಕೊಪ್ಪಳ ಜಿಲ್ಲೆಯಲ್ಲಿನ ಪ್ರಕೃತಿ ವಿಕೋಪ ಪರಿಸ್ಥಿತಿಯ ವರದಿ ಪಡೆದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ.ಮೋಹನ್ ರಾಜ್



ಕೊಪ್ಪಳ ಜುಲೈ 05-

ವಸತಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಕೆ.ಪಿ.ಮೋಹನ್ ರಾಜ್ ಅವರು ಜುಲೈ 4ರಂದು ಕೊಪ್ಪಳ ಜಿಲ್ಲೆಗೆ ಆಗಮಿಸಿ, ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕೊಪ್ಪಳ ಜಿಲ್ಲೆಯಲ್ಲಿನ ಸದ್ಯದ ಮಳೆ, ಬೆಳೆಗಳ ಸ್ಥಿತಿಗತಿ ಹಾಗೂ ಕುಡಿಯುವ ನೀರಿನ ಪರಿಸ್ಥಿತಿಯ ಬಗ್ಗೆ ಅವಲೋಕಿಸಿದರು.

ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆ ಇಲ್ಲ. ಮಳೆಯಾಗುವ ಸಾಧ್ಯತೆ ಕಡಿಮೆ ಇರುತ್ತದೆ. ಇನ್ನು ಮುಂದೆ ಬಿತ್ತನೆ ಮಾಡುವ ರೈತರು ಮಳೆ ಪರಿಸ್ಥಿತಿ ನೋಡಿಕೊಂಡು ಬಿತ್ತನೆ ಮಾಡುವಂತೆ ರೈತರಿಗೆ ಜಾಗೃತಿ ಮೂಡಿಸಲಾಗುತ್ತದೆ. ಕಡಿಮೆ ಮಳೆಗೆ ಇಳುವಡಿ ಕೊಡುವ ಬೆಳೆ ಬೆಳೆಯಲು, ಸಾವಯವ ಕೃಷಿಯತ್ತ ಹೆಚ್ಚಿನ ಗಮನ ಕೊಡಲು ಹಾಗೂ ಬೆಳೆ ವಿಮೆಗೆ ಹೆಸರು ನೋಂದಾಯಿಸುವ ಬಗ್ಗೆ ಕೃಷಿ ಇಲಾಖೆಯ ಅಧಿಕಾರಿಗಳು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ನಿರ್ದೇಶನ ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಅವರು ಸಭೆಗೆ ಮಾಹಿತಿ ನೀಡಿದರು.

ಮೇ ಮತ್ತು ಜೂನ್ ಅಂತ್ಯದವರೆಗೆ ಜಿಲ್ಲೆಯ ವಾಡಿಕೆ ಮಳೆ 130 ಮಿ.ಮೀ ಆಗಿದ್ದು, ವಾಸ್ತವಿಕವಾಗಿ 130 ಮಿಮಿ ಮಳೆಯಾಗಿದೆ. ಕಳೆದ 12 ರಿಂದ 15 ದಿನಗಳಿಂದ ಜಿಲ್ಲೆಯಾದ್ಯಂತ ಸಮರ್ಪಕ ಮಳೆಯಾಗದ ಕಾರಣ ಮಳೆಯ ಕೊರತೆ ಕಂಡುಬಂದಿದೆ. ಹಗಲಿನ ವೇಳೆಯಲ್ಲಿ ಬಿಸಿಲಿನ ತೀವ್ರತೆ ಹೆಚ್ಚಾಗಿರುತ್ತದೆ. ಮಧ್ಯಾಹ್ನದಿಂದ ಸಂಜೆವರೆಗೆ ಮೋಡ ಕವಿದ ವಾತಾವರಣ ಇರುತ್ತದೆ. ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಸಾಮಾನ್ಯ ಬಿತ್ತನೆ ಗುರಿ 3,49,892 ಹೆಕ್ಟೇರ್ ಆಗಿದ್ದು, ಇದುವರೆಗೂ 1,63,546 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದ್ದು, ಶೇ.47 ರಷ್ಟು ಬಿತ್ತನೆ ಕಾರ್ಯ ಪೂರ್ಣಗೊಂಡಿದೆ. ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಇದುವರೆಗೂ 4,400 ಅರ್ಜಿಗಳು ಸ್ವೀಕೃತಗೊಂಡಿದ್ದು, ರೈತರ ನೋಂದಣಿ ಕಾರ್ಯ ಪ್ರಗತಿಯಲ್ಲಿದೆ. ಯೂರಿಯಾ, ಡಿಎಪಿ, ಎಂಒಪಿ, ಕಾಂಪ್ಲೆಕ್ಸ್ , ಎಸ್‌ಎಸ್‌ಪಿ ರಸಗೊಬ್ಬರಗಳ ಒಟ್ಟು ದಾಸ್ತಾನು 64,950 ಟನ್‌ಗಳಲ್ಲಿ 36,954 ಟನ್ ರಸಗೊಬ್ಬರ ಮಾರಾಟ ಮಾಡಲಾಗಿದ್ದು, ಜುಲೈ 2 ರಂತೆ 27,996 ಟನ್ ರಸಗೊಬ್ಬರ ಉಳಿಕೆ ದಾಸ್ತಾನು ಲಭ್ಯವಿದೆ ಎಂದು ಕೃಷಿ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.


ಜಿಲ್ಲೆಯಲ್ಲಿ ಕುಡಿವ ನೀರಿನ ಪರಿಸ್ಥಿತಿಯ ಬಗ್ಗೆ ಕಾರ್ಯದರ್ಶಿಗಳು ಕೇಳಿದರು. ಸದ್ಯಕ್ಕೆ ತುಂಗಭದ್ರಾ ಜಲಾಶಯದಲ್ಲಿ 9.313 ಟಿಎಂಸಿ ನೀರು ಹಾಗೂ ಹಿರೇಹಳ್ಳ ಜಲಾಶಯದಲ್ಲಿ ಸದ್ಯಕ್ಕೆ 1.017 ಟಿಎಂಸಿ ನೀರು ಲಭ್ಯ ಇರುತ್ತದೆ. ಕೊಪ್ಪಳ ಜಿಲ್ಲೆಗೆ ತುಂಗಭದ್ರಾ ಜಲಾಶಯದಿಂದ ಮೂರು ತಿಂಗಳ ಅವಧಿಗೆ 0.54 ಟಿಎಂಸಿ ನೀರು ಬಿಡುಗಡೆ ಮಾಡಲು ಕೋರಿ ಮಾನ್ಯ ಕಲಬುರಗಿ ಪ್ರಾದೇಶಿಕ ಆಯುಕ್ತರಿಗೆ ಪತ್ರ ಬರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳು ಕಾರ್ಯದರ್ಶಿ ಅವರಿಗೆ ಮಾಹಿತಿ ನೀಡಿದರು.

ಕೊಪ್ಪಳ ಜಿಲ್ಲೆಯಲ್ಲಿ ಸಹ ಮುಂದೆ ಬರದ ಪರಿಸ್ಥಿತಿ ಎದುರಾಗುವ ಮುನ್ಸೂಚನೆಯು ದಟ್ಟವಾಗಿದೆ. ಆದ್ದರಿಂದ ಅಧಿಕಾರಿಗಳು ಮುಂಜಾಗ್ರತಾ ಕ್ರಮಗಳನ್ನು ಈಗಿನಿಂದಲೇ ತೆಗೆದುಕೊಳ್ಳಬೇಕು. ಸಮಸ್ಯಾತ್ಮಕ ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆದು ನೀರು ಪೂರೈಕೆಗೆ ಏರ್ಪಾಡು ಮಾಡಬೇಕು. ಹೊಸ ಬೋರ್‌ವೆಲ್ ಕೊರೆಯಿಸಲು ಸರ್ಕಾರದ ಮಾರ್ಗಸೂಚಿಗಳನ್ನು ಕಡ್ಡಾಯ ಅನುಸರಿಸಬೇಕು. ಅಗತ್ಯವಿದ್ದಲ್ಲಿ ಟ್ಯಾಂಕರ್ ನೀರು ಪೂರೈಕೆಗೆ ಕ್ರಮ ವಹಿಸಬೇಕು. ಮಳೆ ಕೊರತೆಯಿಂದಾಗಿ ದನ-ಕರುಗಳಿಗೆ ಸಮಸ್ಯೆ ಆಗಬಹುದು. ಆದ್ದರಿಂದ ಪರಿಸ್ಥಿತಿ ನೋಡಿಕೊಂಡು ಮೇವು ಬ್ಯಾಂಕ್ ಸ್ಥಾಪನೆಗೆ ಕ್ರಮ ವಹಿಸಿ ಎಂದು ಕಾರ್ಯದರ್ಶಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಪ್ರಕೃತಿ ವಿಕೋಪಕ್ಕೆ ಸಂಬಂಧಿಸಿದಂತೆ ಯಾವುದೇ ಸನ್ನಿವೇಶ ಎದುರಿಸಲು ಜಿಲ್ಲಾಡಳಿತ ಸಿದ್ದವಾಗಿದೆ. ಪ್ರಸಕ್ತ ಸಾಲಿನಲ್ಲಿ ಸಿಡಿಲು ಬಡೆದು ಮೃತಪಟ್ಟ ಕುಟುಂಬದವರಿಗೆ ಹಾಗೂ ಜಾನುವಾರು ಪ್ರಾಣ ಹಾನಿ ಪ್ರಕರಣಗಳಿಗೆ ಪರಿಹಾರ ವಿತರಣೆ ಮಾಡಲಾಗಿದೆ. ಮಳೆಯಿಂದಾಗಿ ಭಾಗಶಃ ಹಾನಿಯಾದ 44 ಮನೆಗಳಿಗೆ ಪರಿಹಾರ ಒದಗಿಸಿದೆ. ಕುಡಿಯುವ ನೀರು ಪೂರೈಕೆಗೆ ಅನುದಾನದ ಕೊರತೆ ಇಲ್ಲ ಎಂದು ಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಮಹಮ್ಮದ್ ಜೀಲಾನಿ, ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕ ಶ್ಯಾಮ್‌ಸುಂದರ್ ಕಾಂಬ್ಳೆ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ, ಜಂಟಿ ಕೃಷಿ ನಿರ್ದೇಶಕರಾದ ಜೆ.ಡಿ ಕೃಷ್ಣಮೂರ್ತಿ, ಜಂಟಿ ತೋಟಗಾರಿಕೆ ನಿರ್ದೇಶಕ ಕೃಷ್ಣ ಉಕ್ಕುಂದ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಜುಲೈ 6 ಮತ್ತು 7ಕ್ಕೆ ಸಿ.ಎಂ ಕಲಬುರಗಿ ಪ್ರವಾಸ ಹಿನ್ನೆಲೆ: ಅಧಿಕಾರಿಗಳು ಕೇಂದ್ರಸ್ಥಾನದಲ್ಲಿರುವಂತೆ ಡಿ.ಸಿ. ಸೂಚನೆ



ಕಲಬುರಗಿ,ಜು.5-

ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಕಲಬುರಗಿ ವಿಭಾಗ ಮಟ್ಟದ ಇಲಾಖೆ ಪ್ರಗತಿ ಪರಿಶೀಲನೆ ನಡೆಸಲು ಇದೇ ಜುಲೈ 6 ಮತ್ತು 7 ರಂದು ಕಲಬುರಗಿ ಜಿಲ್ಲಾ ಪ್ರವಾಸ ಕೈಗೊಳ್ಳಲಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿರುವಂತೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಮುಖ್ಯಮಂತ್ರಿಗಳ ಪ್ರವಾಸ ಹಿನ್ನೆಲೆಯಲ್ಲಿ ಶನಿವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು, ರವಿವಾರ ರಜೆ ಇದ್ದರು ಸಹ ಆಯಾ ಇಲಾಖೆಯ ಅಧಿಕಾರಿಗಳು ಸಿ.ಎಂ. ಪ್ರವಾಸ ಕಾರ್ಯಕ್ರಮ ಹಿನ್ನೆಲೆಯಲ್ಲಿ ತಮಗೆ ವಹಿಸಲಾದ ಕೆಲಸ ಕಾರ್ಯಗಳನ್ನು ರವಿವಾರ ಸಂಜೆಯೊಳಗೆ ಪೂರ್ಣಗೊಳಿಸಬೇಕು ಎಂದರು.

ಮುಖ್ಯಮಂತ್ರಿಗಳು ಜುಲೈ 6ಕ್ಕೆ ರಾತ್ರಿ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ. ಜುಲೈ 7ಕ್ಕೆ ಬೆಳಿಗ್ಗೆ ಕಲಬುರಗಿ ವಿಭಾಗ ಮಟ್ಟದ ಪ್ರಗತಿ ಪರಿಶಿಲನಾ ಸಭೆ ನಡೆಸಲಿದ್ದು, ಪ್ರದೇಶದ ಸಚಿವರು, ಶಾಸಕರು, ಆಯಾ ಜಿಲ್ಲೆಗಳ ಡಿ.ಸಿ, ಎಸ್.ಪಿ., ಜಿಲ್ಲಾ ಪಂಚಾಯತ್ ಸಿ.ಇ.ಓ ಸೇರಿದಂತೆ ಪ್ರಮುಖ ಅಧಿಕಾರಿಗಳು ಭಾಗವಹಿಸುವ ನಿರೀಕ್ಷೆ ಇದ್ದು, ಗಣ್ಯರ ಭದ್ರತೆ ಮತ್ತು ಶಿಷ್ಠಾಚಾರದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಸುವಂತೆ ಸೂಚಿಸಿದರು.

ಸಿ.ಎಂ. ಪ್ರವಾಸ ಕಾರ್ಯಕ್ರಮ ಯಶಸ್ವಿಗೊಳಿಸುವ ನಿಟ್ಟನಲ್ಲಿ ವಿವಿಧ ಸಮಿತಿ ರಚಿಸಲಾಗುತ್ತಿದ್ದು, ಅಧಿಕಾರಿಗಳಿಗೆ ನೀಡಿದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಬೇಕು. ಸಭೆಯು ಡಿ.ಸಿ. ಕಚೇರಿ ಸಭಾಂಗಣದಲ್ಲಿ ನಡೆಯುವುದರಿಂದ ಅಂದು ವಿದ್ಯುತ್ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು. ವಿಕಾಸ ಭವನ ಆವರಣ ಸಂಪೂರ್ಣ ಸ್ವಚ್ಛಗೊಳಿಸಬೇಕು. ಬೆಂಗಳೂರಿನಿಂದ ಬರುವ ಅಧಿಕಾರಿಗಳಿಗೆ ಸಮರ್ಪಕ ಸಾರಿಗೆ ವ್ಯವಸ್ಥೆ ಜೊತೆಗೆ ಸಿ.ಎಂ., ಸಚಿವರ ಹಾಗೂ ಇನ್ನಿತರ ಗಣ್ಯರ ಊಟೋಪಚಾರ, ವಸತಿ ವ್ಯವಸ್ಥೆ ಸರಿಯಾಗಿರುವಂತೆ ನೋಡಿಕೊಳ್ಳಬೇಕೆಂದ ಎಂದ ಅವರು, ಪ್ರಗತಿ ಪರಿಶೀಲನೆಗೆ ಆಯಾ ಇಲಾಖೆಯ ಮಾಹಿತಿಯನ್ನು ಕೂಡಲೆ ಡಿ.ಸಿ ಕಚೇರಿಗೆ ಸಲ್ಲಿಸಬೇಕೆಂದರು. ಸಭೆಯಲ್ಲಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ ಅಡ್ಡೂರು ಶ್ರೀನಿವಾಸುಲು, ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ ಸಂಕನೂರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶ್? ರೆಡ್ಡಿ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಅನೇಕ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.



ಪ್ರಾಮಾಣಿಕವಾಗಿ ನ್ಯಾಯ ಒದಗಿಸುವುದೇ ಕಾನೂನಿನ ಮುಖ್ಯ ಉದ್ದೇಶ ನ್ಯಾಯಮೂರ್ತಿ ಪ್ರಭಾವತಿ ಹಿರೇಮಠ


ಬಾಗಲಕೋಟೆ ,ಜು.05-

ಜನರಿಗೆ ಪ್ರಾಮಾಣಿಕವಾಗಿ ನ್ಯಾಯ ಒದಗಿಸುವುದೇ ಕಾನೂನಿನ ಪ್ರಮುಖ ಉದ್ದೇಶವಾಗಿದ್ದು, ಕಾನೂನು ಪದವೀಧರರು ಸಮಾಜದಲ್ಲಿ ನ್ಯಾಯ, ನೈತಿಕತೆ ಮತ್ತು ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯುವ ಜವಾಬ್ದಾರಿಯನ್ನು ಹೊತ್ತು ಕಾರ್ಯನಿರ್ವಹಿಸಬೇಕು ಎಂದು ಬೆಂಗಳೂರಿನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶೆ ಪ್ರಭಾವತಿ ಹಿರೇಮಠ ಹೇಳಿದರು.

ನಗರದ ಬಸವೇಶ್ವರ ಇಂಜಿನಿಯರಿಂಗ್ ಕಾಲೇಜಿನ ಗ್ಯಾಲರಿ ಸಭಾಂಗಣದಲ್ಲಿ ಶನಿವಾರ ನಡೆದ ಬಿ.ವಿ.ವಿ. ಸಂಘದ ಎಸ್.ಸಿ. ನಂದಿಮಠ ಕಾನೂನು ಮಹಾವಿದ್ಯಾಲಯದ 2023 2026ನೇ ಸಾಲಿನ ಪದವಿ ಪ್ರದಾನ ಸಮಾರಂಭದಲ್ಲಿ 114 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿ ಅವರು ಮಾತನಾಡಿದವರು ಕಾನೂನು ಆಳಕ್ಕೆ ಇಳಿದಷ್ಟು ಅದು ಸರಳವಾಗುತ್ತದೆ, ಕಾನೂನು ಪದವಿದರಿಗೆ ಸಾಕಷ್ಟು ಅವಕಾಶಗಳಿವೆ, ವಕೀಲ ವೃತ್ತಿಯಲ್ಲಿ ಹೆಸರಿನ ಜೊತೆ ಹಣವು ಕೂಡಾ ಬರುತ್ತದೆ ಆದರೆ ನಾವು ಪ್ರಾಮಾಣಿಕವಾಗಿ ಜನರಿಗೆ ನ್ಯಾಯವನ್ನು ಒದಗಿಸುವ ಮೂಲಕ ಸಮಾಜದಲ್ಲಿ ಮಾದರಿಯಾಗಬೇಕು ಎಂದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ನಿವೃತ್ತ ವಿಶೇಷ ಸಾರ್ವಜನಿಕ ಅಭಿಯೋಜಕರಾದ ಕೆ.ಜಿ. ಪುರಾಣಿಕಮಠ ಅವರು ಕಾನೂನು ವೃತ್ತಿಯಲ್ಲಿ ಪ್ರಾಮಾಣಿಕತೆ, ಸೇವಾ ಮನೋಭಾವ ಮತ್ತು ವೃತ್ತಿ ನಿಷ್ಠೆ ಅತ್ಯಂತ ಮುಖ್ಯವಾಗಿದ್ದು, ಸಮಾಜದ ವಿಶ್ವಾಸವನ್ನು ಉಳಿಸಿಕೊಳ್ಳುವಂತೆ ಪದವೀಧರರಿಗೆ ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಅವರು ಮಾತನಾಡಿ, ಗುಣಮಟ್ಟದ ಕಾನೂನು ಶಿಕ್ಷಣದ ಮೂಲಕ ಸಮಾಜಮುಖಿ ವಕೀಲರನ್ನು ರೂಪಿಸುವ ಕಾರ್ಯವನ್ನು ಸಂಘ ನಿರಂತರವಾಗಿ ನಡೆಸುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಂಘದ ಸದಸ್ಯರು, ವಿವಿಧ ಕಾಲೇಜು ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷರು, ಪ್ರಾಧ್ಯಾಪಕರು, ಪಾಲಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ವಲಸೆ ಕಾರ್ಮಿಕರ ಬಲಿದಾನ ವ್ಯರ್ಥವಾಗದಿರಲಿ

ಬೆಂಗಳೂರು ದಕ್ಷಿಣ ತಾಲೂಕಿನ ತಾವರೆಕೆರೆಯ ಮಾದಾಪಟ್ಟಣ ಸಮೀಪದಲ್ಲಿನ ಕಲ್ಲು ಕ್ವಾರಿಯಲ್ಲಿ ಬೃಹತ್ ಬಂಡೆಯೊಂದು ಉರುಳಿಬಿದ್ದ ಪರಿಣಾಮವಾಗಿ ಏಳು ಕೂಲಿ ಕಾರ್ಮಿಕರು ಮೃತಪಟ್ಟಿದ್ದು, ನಾಲ್ವರು ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಗುರುವಾರ ನಡೆದಿದೆ. ಮೃತರಲ್ಲಿ ಓರ್ವ ಯಾದಗಿರಿ ಜಿಲ್ಲೆಯವನಾಗಿದ್ದರೆ ಉಳಿದೆಲ್ಲ ಕಾರ್ಮಿಕರು ಹೊರ ರಾಜ್ಯಕ್ಕೆ ಸೇರಿದವರು. ಬಿಹಾರ, ಛತ್ತೀಸ್‌ಗಡ, ಮಧ್ಯ ಪ್ರದೇಶ ರಾಜ್ಯಗಳಿಂದ ಬಂದ ವಲಸೆ ಕಾರ್ಮಿಕರಿವರು. ಪ್ರಕರಣಕ್ಕೆ ಸಂಬಂಧಿಸಿ ಮೂವರನ್ನು ಬಂಧಿಸಲಾಗಿದ್ದು ಮುಖ್ಯ ಆರೋಪಿ ಬಸವೇಶ್ವರ ಕ್ರಷರ್‌ನ ಮಾಲಕ ತಲೆಮರೆಸಿಕೊಂಡಿದ್ದಾನೆ ಎನ್ನಲಾಗಿದೆ.

ಕ್ವಾರಿಯಲ್ಲಿ ದುರಂತ ಸಂಭವಿಸುವ ಸಾಧ್ಯತೆಯಿದೆ ಎಂದು ಗೊತ್ತಿದ್ದರೂ ಯಾವುದೇ ಮುಂಜಾಗ್ರತಾ ಕ್ರಮ ಕೈಗೊಳ್ಳದೆ ಕಾರ್ಮಿಕರಿಂದ ಕೆಲಸ ಮಾಡಿಸಲಾಗಿದೆ. ದುರಂತಕ್ಕೆ ನಿರ್ಲಕ್ಷ್ಯವೇ ಕಾರಣ ಎನ್ನುವುದು ಪ್ರಾಥಮಿಕ ತನಿಖೆಯಿಂದ ಬಹಿರಂಗವಾಗಿದೆ.

ಕಲ್ಲು ಕ್ವಾರಿಗಳಲ್ಲಿ ಇಂತಹ ದುರಂತಗಳು ಸರ್ವೇ ಸಾಮಾನ್ಯ ಎಂಬಂತಾಗಿದೆ. ಈ ಹಿಂದೆಯೂ ಇಂತಹ ಹಲವು ಭೀಕರ ದುರಂತಗಳು ಸಂಭವಿಸಿದಾಗ ಸರಕಾರ ಎಚ್ಚೆತ್ತು ಹಲವು ಅಕ್ರಮ ಕಲ್ಲು ಕ್ವಾರಿಗಳನ್ನು ಮುಚ್ಚಿಸಿವೆ. ಆದರೆ ಮುಚ್ಚಿಸುವ ಪ್ರಹಸನ ಕೆಲವು ತಿಂಗಳುಗಳವರೆಗೆ ಮಾತ್ರ ನಡೆಯುತ್ತಿರುತ್ತವೆ. ದುರಂತದ ಗಾಯ ಆರುತ್ತಿದ್ದಂತೆಯೇ ಕ್ವಾರಿಗಳು ಮತ್ತೆ ತೆರೆದುಕೊಳ್ಳುತ್ತವೆ. 2021ರ ಜನವರಿಯಲ್ಲಿ ಶಿವಮೊಗ್ಗದ ಹುಣಸೋಡು ಗ್ರಾಮದ ಕಲ್ಲು ಕ್ವಾರಿ ಬಳಿ ಲಾರಿಯಲ್ಲಿದ್ದ ಸ್ಫೋಟಕಗಳು ಸ್ಫೋಟಿಸಿದ ಪರಿಣಾಮ ಸುಮಾರು 6 ಕಾರ್ಮಿಕರು ಸ್ಥಳದಲ್ಲೇ ಮೃತಪಟ್ಟಿದ್ದರು. ಈ ಸ್ಫೋಟದ ತೀವ್ರತೆಗೆ ಇಡೀ ಶಿವಮೊಗ್ಗ ಜಿಲ್ಲೆಯೇ ಕಂಪಿಸಿತ್ತು. ಚಿಕ್ಕಬಳ್ಳಾಪುರ ಜಿಲ್ಲೆಯ ಹಿರೇನಾಗವಲ್ಲಿ ಗ್ರಾಮದ ಕಲ್ಲು ಕ್ವಾರಿಯಲ್ಲಿ ಅಕ್ರಮವಾಗಿ ಬಚ್ಚಿಟ್ಟಿದ್ದ ಸ್ಫೋಟಕಗಳನ್ನು ವಿಲೇವಾರಿ ಮಾಡುವಾಗಲೂ ಇದೇ ತರಹದ ಸ್ಫೋಟ ಸಂಭವಿಸಿತ್ತು. ಈ ಭೀಕರ ಸ್ಫೋಟದಲ್ಲೂ ಆರು ಜನರು ಮೃತಪಟ್ಟಿದ್ದರು.ಗುರುವಾರ ನಡೆದ ದುರಂತದಲ್ಲಿ ನಾಲ್ವರ ಸ್ಥಿತಿ ಗಂಭೀರವಿದೆ. ಭವಿಷ್ಯದಲ್ಲಿ ಅವರು ಎಲ್ಲರಂತೆ ಎದ್ದು ಓಡಾಡುವುದು ಕಷ್ಟ. ಸಾಧಾರಣವಾಗಿ ಕಲ್ಲು ಕ್ವಾರಿಯಲ್ಲಿ ಪ್ರತೀ ದಿನ ಒಂದಲ್ಲ ಒಂದು ದುರಂತಗಳು ನಡೆಯುತ್ತಲೇ ಇರುತ್ತವೆ. ಸಾವುಗಳು ಸಂಭವಿಸಿದಾಗ ಮಾತ್ರ ಈ ದುರಂತಗಳು ಮಾಧ್ಯಮಗಳಲ್ಲಿ ಸುದ್ದಿಯಾಗುತ್ತವೆ. ಒಂದೆರಡು ಸಾವುಗಳನ್ನು ಮಾಧ್ಯಮ ಗಂಭೀರವಾಗಿ ತೆಗೆದುಕೊಳ್ಳುವುದಿಲ್ಲ. ದಿನಾ ಸಾಯುವವರಿಗೆ ಅಳುವವರು ಯಾರು? ಎನ್ನುವಂತೆ ಸಾರ್ವಜನಿಕರೂ ಆ ದಿಕ್ಕಿಗೆ ತಿರುಗಿ ನೋಡುವುದಿಲ್ಲ. ಹೀಗಿರುವಾಗ ಗಾಯಗೊಂಡ ಕಾರ್ಮಿಕರ ಬಗ್ಗೆ ಯಾರು ಚಿಂತೆ ಮಾಡುತ್ತಾರೆ? ಇಂತಹ ದುರಂತದಲ್ಲಿ ಮೃತಪಡುವ ಅಥವಾ ಗಾಯಗೊಂಡ ಬಹುತೇಕ ಕಾರ್ಮಿಕರು ವಲಸೆ ಬಂದವರಿರುತ್ತಾರೆ. ಅವರ ಪರವಾಗಿ ಮಾತನಾಡುವವರು, ಅವರಿಗಾಗಿ ಪ್ರತಿಭಟಿಸುವವರು ಯಾರೂ ಇರದ ಕಾರಣ, ಕ್ವಾರಿ ಮಾಲಕರು ಕೊಟ್ಟ ಪರಿಹಾರವನ್ನು ಪಡೆದುಕೊಂಡು ಅವರು ಸುಮ್ಮನಿರಬೇಕಾಗುತ್ತದೆ. ಬಹುತೇಕ ಅಸಂಘಟಿತ ಕಲ್ಲು ಕ್ವಾರಿ ಕಾರ್ಮಿಕರಿಗೆ ಸರಿಯಾದ ವಿಳಾಸಗಳೇ ಇರುವುದಿಲ್ಲ. ಯಾವುದೇ ಸೌಲಭ್ಯಗಳಿಲ್ಲದೆ ದಿನಗೂಲಿಯನ್ನೇ ನೆಚ್ಚಿಕೊಂಡ ಇವರು ಕೆಲಸದ ಸಂದರ್ಭದಲ್ಲಿ ಗಾಯಗೊಂಡರೆ ಶಾಶ್ವತವಾಗಿ ಅಂಗವಿಕಲರಾಗಿ ಬದುಕು ಕಳೆಯಬೇಕಾಗುತ್ತದೆ. ಯಾವುದೇ ಪರಿಹಾರ ಇವರಿಗೆ ದೊರಕುವುದಿಲ್ಲ.

ಮೃತಪಟ್ಟ ಆರು ಮಂದಿ ಕಾರ್ಮಿಕರು ವಲಸೆ ಕಾರ್ಮಿಕರಾಗಿರುವುದರಿಂದ ಪರಿಹಾರದ ವಿಷಯದಲ್ಲಿ ಹೆಚ್ಚು ಕಾಳಜಿ ವಹಿಸುವುದಕ್ಕೆ ಆಗುವುದಿಲ್ಲ ಎಂದು ಸರಕಾರ ಹೇಳುತ್ತಿದೆ. ಕಾರ್ಮಿಕರಿಗೆ ನಿಯಮಾನುಸಾರ ಪರಿಹಾರವನ್ನು ನೀಡಲಾಗುವುದು. ಕಲ್ಲು ಕ್ವಾರಿಯ ಮಾಲಕರೇ ದುರಂತಕ್ಕೆ ಹೊಣೆಯಾಗಿರುವುದರಿಂದ ಅವರ ಮೂಲಕ ಪರಿಹಾರ ಕೊಡಿಸಲಾಗುವುದು ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ. ಸರಕಾರವಾಗಲಿ, ಕಲ್ಲು ಕ್ವಾರಿ ಮಾಲಕರಾಗಲಿ ಸರಿಯಾದ ಪರಿಹಾರವನ್ನು ನೀಡದೇ ಇದ್ದರೆ ಅದಕ್ಕಾಗಿ ನ್ಯಾಯಾಲಯದ ಮೊರೆ ಹೋಗುವ ಯಾವ ಸಾಮರ್ಥ್ಯವೂ ಈ ಕಾರ್ಮಿಕರಿಗೆ ಇಲ್ಲ ಎನ್ನುವುದು ಗೊತ್ತಿರುವ ವಿಷಯವೇ ಆಗಿದೆ. ಬಾಯಿಮಾತಿನಲ್ಲಿ ಪರಿಹಾರ ಘೋಷಿಸಲಾಗುತ್ತದೆಯೇ ಹೊರತು, ಅದು ಎಷ್ಟರಮಟ್ಟಿಗೆ, ಯಾವಾಗ ಕಾರ್ಮಿಕರ ಕುಟುಂಬದ ಕೈ ಸೇರುತ್ತದೆ ಎನ್ನುವ ಭರವಸೆ ಯಾರಿಗೂ ಇಲ್ಲ. ಸಿಕ್ಕಿದಷ್ಟನ್ನು ಪಡೆದುಕೊಂಡು ಅವರು ತಮ್ಮ ಊರು ಸೇರುತ್ತಾರೆ. ತಮ್ಮ ಹಕ್ಕಿಗಾಗಿ ಮತ್ತೆ ಪರವೂರಿಗೆ ಬಂದು ಝುಂಡಾ ಹೂಡುವ ಶಕ್ತಿ ಅವರಿಗಿರುವುದಿಲ್ಲ. ರಾಜ್ಯದ ಕಾರ್ಮಿಕ ಇಲಾಖೆಯ ವಿವಿಧ ಮಂಡಳಿಗಳಲ್ಲಿ 1.72 ಕೋಟಿ ಕಾರ್ಮಿಕರು ನೋಂದಣಿ ಮಾಡಿಕೊಂಡಿದ್ದಾರೆ ಎನ್ನಲಾಗುತ್ತದೆ. ಇವರಲ್ಲಿ 25 ಲಕ್ಷ ಕಟ್ಟಡ ಕಾರ್ಮಿಕರು. ಆದರೆ ಬೇರೆ ಬೇರೆ ರಾಜ್ಯಗಳಿಂದ ವಲಸೆ ಬಂದಿರುವ ಕಾರ್ಮಿಕರು ಈ ನೋಂದಣಿಗಳಲ್ಲಿ ಅವಕಾಶ ಪಡೆದುಕೊಂಡಿಲ್ಲ. ಕ್ವಾರಿಯಂತಹ ಅಪಾಯಕಾರಿ ಸ್ಥಳಗಳಲ್ಲಿ ದುಡಿಯುವ ವಲಸೆ ಕಾರ್ಮಿಕರ ಬಗ್ಗೆ ಯಾವ ಕಾರ್ಮಿಕ ಇಲಾಖೆಯೂ ತಲೆಕೆಡಿಸಿಕೊಂಡಿಲ್ಲ. ಒಂದು ರೀತಿಯಲ್ಲಿ ಬಳಸಿ ಎಸೆಯಲ್ಪಡುವ ಕಾರ್ಮಿಕರು ಇವರು.

ಇಂದು ಬೆಂಗಳೂರು ಸೇರಿದಂತೆ ನಗರಗಳ ಬಹುತೇಕ ಕಟ್ಟಡ ನಿರ್ಮಾಣ ಕಾಮಗಾರಿಗಳಲ್ಲಿ ದುಡಿಯುವವರು ಹೊರರಾಜ್ಯಗಳಿಂದ ಬಂದ ವಲಸೆ ಕಾರ್ಮಿಕರು. ಕಲ್ಲು ಕ್ವಾರಿಯಂತಹ ಅಪಾಯಕಾರಿ ಸ್ಥಳಗಳಲ್ಲಿ ತಮ್ಮ ಪ್ರಾಣ ಒತ್ತೆಯಿಟ್ಟು ಕೆಲಸ ಮಾಡುವವರೂ ಇವರೇ ಇವರ ಈ ದುಡಿಮೆಯನ್ನು ಸರ್ವ ರೀತಿಯಲ್ಲಿ ಬಳಸಿಕೊಳ್ಳುತ್ತಾ, ಅವರು ಆ ಸಂದರ್ಭದಲ್ಲಿ ಜೀವಾಪಾಯವನ್ನು ತಂದುಕೊಂಡಾಗ ಮಾತ್ರ ಹೊರ ರಾಜ್ಯದ ಕಾರ್ಮಿಕರು ಎಂಬ ಹಣೆಪಟ್ಟಿ ಕೊಟ್ಟು ಸೂಕ್ತ ಪರಿಹಾರ ನೀಡಲು ಹಿಂಜರಿಯುವುದು ಅಮಾನವೀಯವಾಗಿದೆ. ಈ ನಾಡಿನ ಅಭಿವೃದ್ಧಿ ಕಾಮಗಾರಿಗಳಿಗೆ ಹೆಗಲು ಕೊಡಲು ಬಂದ ಈ ಕಾರ್ಮಿಕರು ತಾವಾಗಿಯೇ ಬಂದವರಲ್ಲ. ಕಡಿಮೆ ವೇತನಕ್ಕೆ ದುಡಿಯುತ್ತಾರೆ ಎನ್ನುವ ಕಾರಣಕ್ಕಾಗಿ ಕರ್ನಾಟಕದ ಮಧ್ಯವರ್ತಿಗಳೇ ಇವರನ್ನು ಅಲ್ಲಿಂದ ಇಲ್ಲಿಗೆ ಕರೆಸುತ್ತಾರೆ. ಅವರ ದುಡಿಮೆ, ಬೆವರು, ರಕ್ತವನ್ನು ಬಳಸಿಕೊಂಡ ಮೇಲೆ ಅವರ ಬದುಕು, ಭವಿಷ್ಯದ ಜವಾಬ್ದಾರಿಯನ್ನು ಹೊತ್ತುಕೊಳ್ಳುವುದು ನಮ್ಮ ಸರಕಾರದ ಕರ್ತವ್ಯವಾಗುತ್ತದೆ. ವಲಸೆ ಕಾರ್ಮಿಕರಿಗೆ ನ್ಯಾಯಯುತ ಪರಿಹಾರ ನೀಡಲು ಸಾಧ್ಯವಿಲ್ಲ ಎಂದಾದರೆ ಅವರನ್ನು ಇಲ್ಲಿಗೆ ಕರೆಸಿ ದುಡಿಸಿಕೊಳ್ಳುವುದಾದರೂ ಯಾಕೆ?

ಸರಕಾರ ಮೊತ್ತ ಮೊದಲು ಈ ರಾಜ್ಯದ ಅಕ್ರಮ ಕ್ವಾರಿಗಳನ್ನು ಗುರುತಿಸಿ ಅವುಗಳನ್ನು ಮುಚ್ಚಿಸುವ ಕೆಲಸವನ್ನು ಮಾಡಬೇಕು. ಇದೇ ಸಂದರ್ಭದಲ್ಲಿ ಗುರುತಿಸಿರುವ ಸಕ್ರಮ ಕ್ವಾರಿಗಳಲ್ಲಿರುವ ಮುಂಜಾಗ್ರತಾ ಕ್ರಮಗಳ ಬಗ್ಗೆ ವರದಿಯನ್ನು ತರಿಸಿಕೊಳ್ಳಬೇಕು. ಕ್ವಾರಿಗಳ ಕೆಲಸ ಮುಗಿದ ಬಳಿಕ ಆ ಅಪಾಯಕಾರಿ ಹೊಂಡಗಳನ್ನು ತೆರೆದಿಟ್ಟರೆ ಮಳೆಗಾಲದಲ್ಲಿ ಸಂಭವಿಸುವ ದುರಂತಗಳ ಬಗ್ಗೆಯೂ ಸರಕಾರ ಮುಂಜಾಗ್ರತೆಯನ್ನು ವಹಿಸಬೇಕು. ಇದೇ ಸಂದರ್ಭದಲ್ಲಿ ಕ್ವಾರಿಗಳಲ್ಲಿರುವ ಕಾರ್ಮಿಕರನ್ನು ಗುರುತಿಸಿ ಅವರಲ್ಲಿ ವಲಸೆ ಕಾರ್ಮಿಕರೆಷ್ಟು, ರಾಜ್ಯದ ಕಾರ್ಮಿಕರೆಷ್ಟು ಎನ್ನುವ ದಾಖಲೆಗಳೂ ಸರಕಾರದಲ್ಲಿರಬೇಕು. ಈ ಕ್ವಾರಿಗಳು ಹೊರರಾಜ್ಯದ ಕಾರ್ಮಿಕರನ್ನು ಅಕ್ರಮವಾಗಿ ದುಡಿಸಿಕೊಳ್ಳುತ್ತಿದ್ದರೆ ಕ್ವಾರಿ ಮಾಲಕರ ಮೇಲೆ ಕಠಿಣ ಕ್ರಮವನ್ನು ತೆಗೆದುಕೊಳ್ಳಬೇಕು. ವಲಸೆ ಕಾರ್ಮಿಕರಿಗೆ ಸೂಕ್ತ ವೇತನ, ಆಶ್ರಯ, ಪರಿಹಾರ ನೀಡಲು ಸಾಧ್ಯವಿದ್ದರೆ ಮಾತ್ರ ಅವರನ್ನು ದುಡಿಮೆಗೆ ಬಳಸಿಕೊಳ್ಳುವಂತಹ ವಾತಾವರಣ ರಾಜ್ಯದಲ್ಲಿ ನಿರ್ಮಾಣವಾಗಬೇಕು. ನಮ್ಮ ನಾಡಿನ ಅಭಿವೃದ್ಧಿ ಕಾರ್ಯಗಳಿಗಾಗಿ ವಲಸೆ ಕಾರ್ಮಿಕರು ಮಾಡುವ ಬಲಿದಾನಗಳನ್ನು ನಾವು ಯಾವ ಕಾರಣಕ್ಕೂ ಕ್ಷುಲ್ಲಕವಾಗಿ ಕಾಣಬಾರದು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ತುಮಕೂರು ಪೆರಿಫೆರಲ್ ರಿಂಗ್ ರಸ್ತೆ: ರೈತರ ಬದುಕು ಮತ್ತು ಅಭಿವೃದ್ಧಿಯ ನಡುವಿನ ಸಂಘರ್ಷ



ತುಮಕೂರು ತಾಲ್ಲೂಕಿನ ನಂದಿಹಳ್ಳಿಯಿಂದ ಮಲ್ಲಸಂದ್ರ-ವಸಂತಾನರಸಾಪುರದವರೆಗೆ ಸುಮಾರು 44.10 ಕಿ.ಮೀ. ಉದ್ದದ ನಾಲ್ಕು ಪಥದ ಹೊರವರ್ತುಲ (ಪೆರಿಫೆರಲ್ ರಿಂಗ್) ರಸ್ತೆ ನಿರ್ಮಾಣ ಯೋಜನೆ ಪ್ರಸ್ತುತ ಜಿಲ್ಲೆಯ ಪ್ರಮುಖ ಚರ್ಚೆಯ ವಿಷಯವಾಗಿದೆ.

ಒಂದೆಡೆ ಈ ಯೋಜನೆ ಕೈಗಾರಿಕೆ ಮತ್ತು ಸಾರಿಗೆ ಅಭಿವೃದ್ಧಿಗೆ ನೆರವಾಗಲಿದೆ ಎಂಬ ವಾದವಿದ್ದರೆ, ಮತ್ತೊಂದೆಡೆ ಸಾವಿರಾರು ಎಕರೆ ಫಲವತ್ತಾದ ಕೃಷಿ ಭೂಮಿ ನಾಶವಾಗಿ ನೂರಾರು ರೈತ ಕುಟುಂಬಗಳು ಬದುಕು ಕಳೆದುಕೊಳ್ಳಲಿವೆ ಎಂಬ ಆತಂಕ ರೈತರಲ್ಲಿ ತೀವ್ರವಾಗಿದೆ.

ನಂದಿಹಳ್ಳಿ, ಕೌತಮಾರನಹಳ್ಳಿ, ಭೈರಸಂದ್ರ, ಗೂಳೆಹರವಿ, ವಡ್ಡರಹಳ್ಳಿ, ದೊಡ್ಡಸಾರಂಗಿ, ಚಿಕ್ಕಸಾರಂಗಿ, ಮಲ್ಲಸಂದ್ರ ಹಾಗೂ ವಸಂತಾನರಸಾಪುರ ಸೇರಿದಂತೆ ಒಟ್ಟು 26 ಗ್ರಾಮಗಳ ಮೂಲಕ ಸಾಗುವ ಈ ರಸ್ತೆಗಾಗಿ ಸುಮಾರು 765 ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಆರಂಭವಾಗಿದೆ. ಇದರಿಂದ 750ಕ್ಕೂ ಹೆಚ್ಚು ರೈತ ಕುಟುಂಬಗಳು ನೇರವಾಗಿ ಬಾಧಿತರಾಗಲಿವೆ ಎಂದು ರೈತರು ಹೇಳುತ್ತಿದ್ದಾರೆ.

ಭೂಮಿ ಕಳೆದುಕೊಂಡರೆ ಕೃಷಿಯನ್ನೇ ನಂಬಿಕೊಂಡಿರುವ ಕುಟುಂಬಗಳ ಜೀವನ ಸಂಪೂರ್ಣವಾಗಿ ಅಸ್ತವ್ಯಸ್ತವಾಗಲಿದೆ. ಸರ್ಕಾರ ಸೂಕ್ತ ಪರ್ಯಾಯ ವ್ಯವಸ್ಥೆ ಕಲ್ಪಿಸದಿದ್ದರೆ ರೈತರು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಯಿದೆ ಎಂದು ಹೋರಾಟಗಾರರು ಎಚ್ಚರಿಸಿದ್ದಾರೆ.

ಈ ಯೋಜನೆಯ ಹಿಂದೆ ರಿಯಲ್ ಎಸ್ಟೇಟ್ ಹಿತಾಸಕ್ತಿಗಳಿವೆ ಎಂದು ರೈತರು ಗಂಭೀರ ಆರೋಪ ಮಾಡುತ್ತಿದ್ದಾರೆ. ರಸ್ತೆ ನಿರ್ಮಾಣದಿಂದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭೂಮಿಯ ಬೆಲೆ ಏರಿಕೆಯಾಗುವುದರಿಂದ ಖಾಸಗಿ ಶಿಕ್ಷಣ ಸಂಸ್ಥೆಗಳು, ವಾಣಿಜ್ಯ ಮತ್ತು ರಿಯಲ್ ಎಸ್ಟೇಟ್ ಉದ್ಯಮಿಗಳಿಗೆ ದೊಡ್ಡ ಲಾಭವಾಗಲಿದೆ. ಆದರೆ ಭೂಮಿ ಕಳೆದುಕೊಳ್ಳುವ ರೈತರಿಗೆ ಯಾವುದೇ ಶಾಶ್ವತ ಪ್ರಯೋಜನವಿಲ್ಲ ಎಂಬುದು ಅವರ ವಾದ.

ಗ್ರಾಮಸ್ಥರು ಕೇಂದ್ರ ಸಚಿವ ವಿ. ಸೋಮಣ್ಣ ಅವರಿಗೆ ಯೋಜನೆಯನ್ನು ಮರುಪರಿಶೀಲಿಸುವಂತೆ ಮನವಿ ಮಾಡಿದ್ದು, ''ರೈತರ ಬದುಕು ಉಳಿಸಿ'' ಎಂದು ಒತ್ತಾಯಿಸಿದ್ದಾರೆ.

ತುಮಕೂರು ನಗರ ವ್ಯಾಪ್ತಿಯ ಸಂಚಾರ ದಟ್ಟಣೆ ಕಡಿಮೆ ಮಾಡುವುದು ಹಾಗೂ ಶಿವಮೊಗ್ಗ ರಸ್ತೆ ಮತ್ತು ವಸಂತಾನರಸಾಪುರ ಕೈಗಾರಿಕಾ ಪ್ರದೇಶಕ್ಕೆ ಉತ್ತಮ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಈ ಯೋಜನೆ ಹಲವು ವರ್ಷಗಳ ಹಿಂದೆಯೇ ಪ್ರಸ್ತಾಪಗೊಂಡಿತ್ತು. ಮಾಜಿ ಸಂಸದರು ಎಸ್.ಪಿ. ಮುದ್ದಹನುಮೇಗೌಡ ಮತ್ತು ಜಿ.ಎಸ್. ಬಸವರಾಜ ಅವರ ಅವಧಿಯಲ್ಲಿ ಪ್ರಾಥಮಿಕ ಪ್ರಕ್ರಿಯೆಗಳು ನಡೆದಿದ್ದವು.

2024ರಲ್ಲಿ ಕೇಂದ್ರ ಸಚಿವರಾದ ಬಳಿಕ ತುಮಕೂರು ಸಂಸದ ವಿ. ಸೋಮಣ್ಣ ಅವರ ಅವಧಿಯಲ್ಲಿ ಯೋಜನೆಗೆ ಮತ್ತೆ ವೇಗ ಸಿಕ್ಕಿದೆ. ಸಾವಿರ ಕೋಟಿ ರೂಪಾಯಿಗೂ ಹೆಚ್ಚು ವೆಚ್ಚದ ಈ ಯೋಜನೆಯ ಅನುಷ್ಠಾನ ಪ್ರಕ್ರಿಯೆ ಮುಂದುವರಿದಿದೆ.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಈಗಾಗಲೇ ಭೂಮಿ ಗುರುತು ಮಾಡುವ ಕೆಲಸ ಆರಂಭಿಸಿದೆ. ಆದರೆ ಭೂಸ್ವಾಧೀನ ಕಾಯ್ದೆಯ ನಿಯಮಗಳನ್ನು ಪಾಲಿಸಲಾಗಿಲ್ಲ, ಪರಿಸರ ಪರಿಣಾಮ ಅಧ್ಯಯನ ಸಮರ್ಪಕವಾಗಿ ನಡೆದಿಲ್ಲ ಹಾಗೂ ಫಲವತ್ತಾದ ಭೂಮಿಯನ್ನು ಪಹಣಿಯಲ್ಲಿ ಖುಷ್ಕಿ ಭೂಮಿಯೆಂದು ದಾಖಲಿಸಿ ರೈತರಿಗೆ ಅನ್ಯಾಯ ಮಾಡಲಾಗುತ್ತಿದೆ ಎಂದು ರೈತರು ಆರೋಪಿಸುತ್ತಿದ್ದಾರೆ.

ಜಿಲ್ಲಾಡಳಿತಕ್ಕೆ ಹಲವು ಮನವಿಗಳನ್ನು ಸಲ್ಲಿಸಿದರೂ ಸ್ಪಂದನೆ ದೊರೆತಿಲ್ಲ ಎಂದು ರೈತ ಸಂಘಟನೆಗಳು ಅಸಮಾಧಾನ ವ್ಯಕ್ತಪಡಿಸಿವೆ.

ಶೂಲದ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ನಡೆದ ರೈತ ಸಮಾವೇಶದಲ್ಲಿ ಯೋಜನೆಯ ಡಿಪಿಆರ್ ಪ್ರತಿಯನ್ನು ಸುಟ್ಟು ಪ್ರತಿಭಟನೆ ನಡೆಸಲಾಗಿತ್ತು. ಯೋಜನೆ ಕೈಬಿಡದಿದ್ದರೆ ಗಾಂಧಿ ಮಾರ್ಗದಲ್ಲಿ ಅಸಹಕಾರ ಚಳವಳಿ ಸೇರಿದಂತೆ ವಿವಿಧ ಹಂತದ ಹೋರಾಟಗಳನ್ನು ಹಮ್ಮಿಕೊಳ್ಳುವುದಾಗಿ ರೈತರು ಘೋಷಿಸಿದ್ದಾರೆ.

ರಾಷ್ಟ್ರೀಯ ಏಕತಾ ಪರಿಷತ್ ನಾಯಕ ಪಿ.ವಿ. ರಾಜಗೋಪಾಲ್ ಸೇರಿದಂತೆ ವಿವಿಧ ರೈತಪರ ಸಂಘಟನೆಗಳು, ಎಡಪಂಥೀಯ ಪಕ್ಷಗಳ ನಾಯಕರು ಹಾಗೂ ಕೆಲ ಮಾಜಿ ಶಾಸಕರು ರೈತರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದ್ದಾರೆ. ಪಕ್ಷಾತೀತವಾಗಿ ಎಲ್ಲ ಜನಪ್ರತಿನಿಧಿಗಳು ರೈತರ ಪರ ನಿಲ್ಲಬೇಕೆಂದು ಅವರು ಕರೆ ನೀಡಿದ್ದಾರೆ.

ತುಮಕೂರು ಗ್ರಾಮಾಂತರ ಮಾಜಿ ಶಾಸಕ ಡಿ.ಸಿ. ಗೌರಿಶಂಕರ್ ಅವರು ಕೂಡ ರೈತರ ಪರವಾಗಿ ಹೋರಾಟ ರೂಪಿಸುವ ಭಾಗವಾಗಿ ಕೇಂದ್ರ ಸಚಿವ ವಿ. ಸೋಮಣ್ಣ ಅವರಿಗೆ ಪತ್ರ ಬರೆದಿದ್ದಾರೆ. ರೈತರ ಸಭೆ ನಡೆಸಿ ಯೋಜನೆ ಕೈಬಿಡುವಂತೆ ಒತ್ತಾಯಿಸಿದ್ದಾರೆ.

ತುಮಕೂರು ವೇಗವಾಗಿ ವಿಸ್ತರಿಸುತ್ತಿರುವ ನಗರ. ಸಂಚಾರ ದಟ್ಟಣೆ ನಿವಾರಣೆ ಹಾಗೂ ಕೈಗಾರಿಕಾ ಅಭಿವೃದ್ಧಿಗೆ ಹೊಸ ಸಂಪರ್ಕ ರಸ್ತೆಗಳ ಅಗತ್ಯವಿದೆ ಎಂಬುದು ಸರ್ಕಾರದ ವಾದ. ಆದರೆ ಮತ್ತೊಂದೆಡೆ ಫಲವತ್ತಾದ ಕೃಷಿ ಭೂಮಿ ಕಳೆದುಕೊಳ್ಳುವುದು, ರೈತರ ಜೀವನೋಪಾಯಕ್ಕೆ ಧಕ್ಕೆ ಉಂಟಾಗುವುದು ಹಾಗೂ ಪರಿಸರದ ಮೇಲೆ ಪರಿಣಾಮ ಬೀರುವುದು ಎಂಬ ಆತಂಕವೂ ಅಷ್ಟೇ ಗಂಭೀರವಾಗಿದೆ.

ಅಭಿವೃದ್ಧಿ ಯೋಜನೆಗಳು ಅಗತ್ಯವಾದರೂ, ಅವು ರೈತರ ಬದುಕಿಗೆ ಹೊರೆಯಾಗದಂತೆ ಪರ್ಯಾಯ ಮಾರ್ಗಗಳ ಪರಿಶೀಲನೆ, ನ್ಯಾಯಯುತ ಪರಿಹಾರ, ಪಾರದರ್ಶಕ ಭೂಸ್ವಾಧೀನ ಹಾಗೂ ಸ್ಥಳೀಯರ ಅಭಿಪ್ರಾಯಕ್ಕೆ ಗೌರವ ನೀಡುವುದು ಸರ್ಕಾರದ ಜವಾಬ್ದಾರಿಯಾಗಿದೆ.

ರೈತರು, ಜನಪರ ಸಂಘಟನೆಗಳು ಹಾಗೂ ಭೂಸ್ವಾಧೀನ ಹೋರಾಟ ಸಮಿತಿ ಈಗಾಗಲೇ ಮತ್ತೊಂದು ಹಂತದ ಹೋರಾಟಕ್ಕೆ ಸಿದ್ಧತೆ ನಡೆಸಿವೆ. ಸರ್ಕಾರ ಯೋಜನೆಯ ಮಾರ್ಗ ಬದಲಾವಣೆ, ಮರುಪರಿಶೀಲನೆ ಅಥವಾ ರೈತರ ಬೇಡಿಕೆಗಳನ್ನು ಪರಿಗಣಿಸುತ್ತದೆಯೇ ಎಂಬುದು ಮುಂದಿನ ದಿನಗಳಲ್ಲಿ ಸ್ಪಷ್ಟವಾಗಲಿದೆ.

ತುಮಕೂರಿನ ಅಭಿವೃದ್ಧಿ ಮತ್ತು ರೈತರ ಬದುಕಿನ ನಡುವಿನ ಈ ಸಂಘರ್ಷ ಯಾವ ತಿರುವು ಪಡೆಯುತ್ತದೆ ಎಂಬುದನ್ನು ಕಾದು ನೋಡಬೇಕಿದೆ.

ಪಾಟ್ನಾ ಉಪಸಮರ 40 ವರ್ಷದ ಬಿಜೆಪಿ ಕೋಟೆ ಭೇದಿಸಲು ಪ್ರಶಾಂತ್ ಕಿಶೋರ್ ಸಜ್ಜು!



ಪಾಟಲಿಪುತ್ರ (ಪಾಟ್ನಾ)ದ ಮಣ್ಣಿನಲ್ಲಿ ರಾಜಕೀಯದ ಹೊಸ ಜಟಾಪಟಿಗೆ ವೇದಿಕೆ ಸಜ್ಜಾಗಿದೆ. ನಾಲ್ಕು ದಶಕಗಳ ಭದ್ರಕೋಟೆಯನ್ನು ಉಳಿಸಿಕೊಳ್ಳಲು ಕಮಲ ಪಡೆ ಹರಸಾಹಸ ಪಡುತ್ತಿದ್ದರೆ, ತನ್ನ ಅಸ್ತಿತ್ವದ ಅಗ್ನಿಪರೀಕ್ಷೆಯಲ್ಲಿದ್ದ ಪ್ರಶಾಂತ್ ಕಿಶೋರ್ ಅವರ ಜನ್ ಸುರಾಜ್ ಪಾರ್ಟಿಯು ಈ ಕ್ಷೇತ್ರವನ್ನು ಪರ್ಯಾಯ ರಾಜಕಾರಣದ ಪ್ರಯೋಗಶಾಲೆಯನ್ನಾಗಿ ಪರಿವರ್ತಿಸಲು ಸಜ್ಜಾಗಿದೆ. ಆಡಳಿತ ವಿರೋಧಿ ಅಲೆಯ ಲಾಭ ಪಡೆಯಲು ಪಿಕೆ ಸಿದ್ಧಪಡಿಸಿರುವ ತಂತ್ರಗಾರಿಕೆ, ಬಿಜೆಪಿಯ ಪ್ರತಿಷ್ಠಿತ ಕೋಟೆಯನ್ನು ಭೇದಿಸುತ್ತಾ? ಅಥವಾ ಪಾಟ್ನಾದ ಮತದಾರರು ಸಾಂಪ್ರದಾಯಿಕ ಶಕ್ತಿಗಳಿಗೇ ಮಣೆ ಹಾಕುತ್ತಾರಾ? ಎಂಬುದರ ಸುತ್ತ ಬಿಸಿ ಬಿಸಿ ಚರ್ಚೆ ಶುರುವಾಗಿದೆ.

ಇದೇ ಜುಲೈ 30ರಂದು ನಡೆಯಲಿರುವ ಪಾಟ್ನಾದ ಬಾಂಕಿಪುರ ಉಪಚುನಾವಣೆಯು, ಕಳೆದ 4 ದಶಕಗಳಿಂದ ಬಿಜೆಪಿಯ ಹಿಡಿತದಲ್ಲಿರುವ ಈ ನಗರ ಕ್ಷೇತ್ರವನ್ನು ಪ್ರಶಾಂತ್ ಕಿಶೋರ್ ಅವರ ಜನ್ ಸುರಾಜ್ ಪಾರ್ಟಿ ಹೇಗೆ ಎದುರಿಸಲಿದೆ ಎಂಬ ಕುತೂಹಲ ಹುಟ್ಟುಹಾಕಿದೆ. 1995 ರಿಂದ ನಿರಂತರವಾಗಿ ಈ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದ ಬಿಜೆಪಿ ನಾಯಕ ನಿತಿನ್ ನಬಿನ್ ಕುಟುಂಬದ ವರ್ಚಸ್ಸು ಮತ್ತು ಆ ಭದ್ರಕೋಟೆಯನ್ನು ಭೇದಿಸಲು ಜನ್ ಸುರಾಜ್ ಪಾರ್ಟಿ ನಡೆಸುತ್ತಿರುವ ತಯಾರಿಗಳು, ಬಿಹಾರದ ಸಾಂಪ್ರದಾಯಿಕ ರಾಜಕೀಯ ಧ್ರುವೀಕರಣಕ್ಕೆ ದೊಡ್ಡ ಸವಾಲಾಗಿ ಪರಿಣಮಿಸಿವೆ.

ಬಿಜೆಪಿಯ ಅಪ್ರತಿಮ ಭದ್ರಕೋಟೆ ಬಾಂಕಿಪುರವು ಬಿಹಾರದ ಅತ್ಯಂತ ಹಳೆಯ ಮತ್ತು ಪ್ರತಿಷ್ಠಿತ ಕ್ಷೇತ್ರಗಳಲ್ಲಿ ಒಂದು. ಈ ಕ್ಷೇತ್ರವು ಸಂಪೂರ್ಣವಾಗಿ ನಗರ ಕೇಂದ್ರಿತವಾಗಿದ್ದು, ಇಲ್ಲಿನ ಮತದಾರರು ವಿದ್ಯಾವಂತರು, ಮಧ್ಯಮ ವರ್ಗದವರು ಮತ್ತು ವ್ಯಾಪಾರಿ ಸಮುದಾಯದವರು. ದಶಕಗಳಿಂದ ಈ ಕ್ಷೇತ್ರವನ್ನು ನಬಿನ್ ಕುಟುಂಬ ಆಳುತ್ತಾ ಬಂದಿದೆ. ನಬಿನ್ ಅವರ ತಂದೆ ದಿ.ಕಿಶೋರ್ ಪ್ರಸಾದ್ ಸಿನ್ಹಾ ಅವರು 1995 ರಿಂದ 2006 ರವರೆಗೆ ಈ ಕ್ಷೇತ್ರವನ್ನು ಪ್ರತಿನಿಧಿಸಿದ್ದರು. ಅವರ ನಿಧನದ ನಂತರ ನಡೆದ ಉಪಚುನಾವಣೆಯಲ್ಲಿ ನಿತಿನ್ ನಬಿನ್ ಆಯ್ಕೆಯಾಗಿದ್ದರು. ಈಗ ನಿತಿನ್ ನಬಿನ್ ಅವರು ರಾಜ್ಯಸಭೆಗೆ ಆಯ್ಕೆಯಾದ ಹಿನ್ನೆಲೆಯಲ್ಲಿ ಈ ಸ್ಥಾನ ತೆರವಾಗಿದೆ. ನಿತಿನ್ ಈಗ ಯ ರಾಷ್ಟ್ರೀಯ ಅಧ್ಯಕ್ಷರಾಗಿ ಜವಾಬ್ದಾರಿ ವಹಿಸಿಕೊಂಡಿದ್ದಾರೆ. ಇಲ್ಲಿನ ಕಾಯಸ್ಥ ಸಮುದಾಯವು ರಾಜಕೀಯವಾಗಿ ನಿರ್ಣಾಯಕವಾಗಿದ್ದು, ಬಿಜೆಪಿಯ ಬಲವಾದ ವೋಟ್ ಬ್ಯಾಂಕ್ ಆಗಿದೆ. ಈ ಕ್ಷೇತ್ರವನ್ನು ಕಳೆದುಕೊಳ್ಳುವುದು ಬಿಜೆಪಿಗೆ ಒಂದು ಸ್ಥಾನದ ನಷ್ಟ ಮಾತ್ರವಲ್ಲ, ತನ್ನ ದಶಕಗಳ ರಾಜಕೀಯ ವರ್ಚಸ್ಸಿ ಗೆ ಧಕ್ಕೆಯುಂಟಾಗುವ ವಿಷಯ.

ಒಂದು ದಶಕದ ಕಾಲ ಭಾರತದ ಪ್ರಮುಖ ರಾಜಕೀಯ ಪಕ್ಷಗಳಿಗೆ ಗೆಲುವಿನ ತಂತ್ರಗಾರಿಕೆ ರೂಪಿಸುತ್ತಿದ್ದ ಪ್ರಶಾಂತ್ ಕಿಶೋರ್, ಈಗ ಸ್ವತಃ ಅಖಾಡಕ್ಕಿಳಿದಿದ್ದಾರೆ. ಆದರೆ, ಅವರ ಜನ್ ಸುರಾಜ್ ಪಾರ್ಟಿಯ ಆರಂಭಿಕ ಹಾದಿ ಅಷ್ಟು ಸುಗಮವಾಗಿಲ್ಲ. 2025ರ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ 236 ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದರು. ಈ ಪೈಕಿ ಒಂದು ಸ್ಥಾನವನ್ನೂ ಗೆಲ್ಲಲು ಗೆಲ್ಲಲಾಗಲಿಲ್ಲ. ಹಲವಾರು ಕ್ಷೇತ್ರಗಳಲ್ಲಿ ಜನ್ ಸುರಾಜ್ ಅಭ್ಯರ್ಥಿಗಳು ನೋಟಾ () ಗಿಂತ ಕಡಿಮೆ ಮತಗಳನ್ನು ಪಡೆದಿದ್ದರು. ಆಗ ಪಿಕೆ ಅವರ ರಾಜಕೀಯ ತಂತ್ರಗಾರಿಕೆ ಮತ್ತು ವಾಸ್ತವಿಕ ರಾಜಕಾರಣದ ನಡುವಿನ ಅಂತರ ಸಾಕಷ್ಟಿದೆ ಎಂದು ಟೀಕಿಸಲಾಗಿತ್ತು. ಹೀಗಾಗಿ, ಸದ್ಯಕ್ಕಿರುವ ಬಾಂಕಿಪುರ ಉಪಚುನಾವಣೆ ಅವರ ಪಾಲಿಗೆ ತಮ್ಮ ಪರ್ಯಾಯ ರಾಜಕಾರಣದ ಪರಿಕಲ್ಪನೆಯನ್ನು ಸಾಬೀತುಪಡಿಸಲು ಇರುವ ಅಂತಿಮ ಅವಕಾಶದಂತೆ ಕಾಣುತ್ತಿದೆ. ಈ ಬಾರಿ ಪ್ರಶಾಂತ್ ಕಿಶೋರ್ ಅವರೇ ಸ್ವತಃ ಕಣಕ್ಕಿಳಿಯುವ ಸಾಧ್ಯತೆ ಹೆಚ್ಚಿದೆ.

ಪ್ರಶಾಂತ್ ಕಿಶೋರ್ ಈ ಉಪಚುನಾವಣೆಯನ್ನು ಸಾಮ್ರಾಟ್ ಚೌಧರಿ ನೇತೃತ್ವದ ಎನ್‌ಡಿಎ ಸರ್ಕಾರದ ಕಾರ್ಯವೈಖರಿಯ ವಿರುದ್ಧದ ರೆಫರೆಂಡಂ ಎಂದು ಕರೆದಿದ್ದಾರೆ. ನೀಟ್ () ಪರೀಕ್ಷೆಯ ಅಕ್ರಮಗಳು, ನಿರುದ್ಯೋಗ, ರಾಜ್ಯದಿಂದ ಬೃಹತ್ ಸಂಖ್ಯೆಯಲ್ಲಿ ಯುವಕರ ವಲಸೆ ಮತ್ತು ಶಿಕ್ಷಣ-ಆರೋಗ್ಯ ವಲಯದ ದಯನೀಯ ಸ್ಥಿತಿಯನ್ನು ಅವರು ಪ್ರಮುಖ ಚುನಾವಣಾ ವಿಷಯಗಳನ್ನಾಗಿ ಮಾಡಿಕೊಂಡಿದ್ದಾರೆ. ಸಾಮ್ರಾಟ್ ಚೌಧರಿ ಅವರ ಆಡಳಿತವನ್ನು ಅಸ್ಥಿರ ಮತ್ತು ದಕ್ಷತೆಯಿಲ್ಲದ ಆಡಳಿತ ಎಂದು ಟೀಕಿಸುತ್ತಿರುವ ಕಿಶೋರ್, ಸ್ಥಳೀಯ ಮಟ್ಟದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರವನ್ನು ಅಸ್ತ್ರವನ್ನಾಗಿಸಿಕೊಂಡಿದ್ದಾರೆ. ವಿಶೇಷವಾಗಿ ಬಾಂಕಿಪುರದಂತಹ ವಿದ್ಯಾವಂತ ನಗರ ಮತದಾರರು ಎದುರಿಸುತ್ತಿರುವ ಮೂಲಭೂತ ಸಮಸ್ಯೆಗಳನ್ನು ಮುಂದಿಟ್ಟುಕೊಂಡು, ಮತದಾರರ ಆಕ್ರೋಶವನ್ನು ತಮ್ಮತ್ತ ಸೆಳೆಯಲು ಪ್ರಯತ್ನಿಸುತ್ತಿದ್ದಾರೆ.

ಬಿಜೆಪಿ ತನ್ನ ಭದ್ರಕೋಟೆಯನ್ನು ಉಳಿಸಿಕೊಳ್ಳಲು ಅತ್ಯಂತ ಎಚ್ಚರಿಕೆಯ ಹೆಜ್ಜೆಗಳನ್ನಿಡುತ್ತಿದೆ. ಅಭ್ಯರ್ಥಿಗಳ ಆಯ್ಕೆಯಲ್ಲಿ ಜಾತಿ ಸಮೀಕರಣ ಮತ್ತು ಪಕ್ಷದ ನಿಷ್ಠೆಯ ನಡುವೆ ತೀವ್ರ ಕಸರತ್ತು ನಡೆಸುತ್ತಿದೆ. ನೀಲ್ ರತನ್ ಘೋಷ್, ಅಜಯ್ ಅಲೋಕ್, ಆಶಿಶ್ ಸಿನ್ಹಾ ಮತ್ತು ರೀತು ಜೈಸ್ವಾಲ್ ಅವರಂತಹ ಹೆಸರುಗಳು ಚರ್ಚೆಯಲ್ಲಿವೆ. ನೀಲ್ ರತನ್ ಘೋಷ್ ಅವರು ನಿತಿನ್ ನಬಿನ್ ಅವರ ಆಪ್ತ ವಲಯದವರಾಗಿರುವುದರಿಂದ ಮತ್ತು ಕುಟುಂಬದೊಂದಿಗೆ ನಿಕಟ ಸಂಪರ್ಕ ಹೊಂದಿರುವ ಕಾರಣ ಮುಂಚೂಣಿಯಲ್ಲಿದ್ದಾರೆ. ಮತ್ತೊಂದೆಡೆ, ಅಜಯ್ ಅಲೋಕ್ ಅವರ ತೀಕ್ಷ್ಣ ಭಾಷಣದ ಶೈಲಿ ಹಾಗೂ ಟಿವಿ ಚರ್ಚೆಗಳಲ್ಲಿನ ಪ್ರಭಾವವು ಅವರನ್ನು ಪ್ರಬಲ ಅಭ್ಯರ್ಥಿಯನ್ನಾಗಿಸಿದೆ. ಮಾಜಿ ಶಾಸಕ ಅರುಣ್ ಸಿನ್ಹಾ ಅವರ ಪುತ್ರ ಆಶಿಶ್ ಸಿನ್ಹಾ ಅವರಿಗೆ ಅವಕಾಶ ನೀಡುವ ಮೂಲಕ ಅನುಕಂಪದ ಮತಗಳನ್ನು ಸೆಳೆಯುವ ಸಾಧ್ಯತೆಯನ್ನೂ ಪಕ್ಷ ಪರಿಗಣಿಸಿದೆ. ಮಹಿಳಾ ಮತ್ತು ವೈಶ್ಯ ಮತದಾರರನ್ನು ಸೆಳೆಯಲು ರೀತು ಜೈಸ್ವಾಲ್ ಅವರಿಗೆ ಟಿಕೆಟ್ ನೀಡಿದರೂ ಅಚ್ಚರಿಯಿಲ್ಲ. ಬಿಜೆಪಿ ತನ್ನ ಸಾಂಪ್ರದಾಯಿಕ ಮತಬ್ಯಾಂಕ್ ಅನ್ನು ಉಳಿಸಿಕೊಳ್ಳಲು ಯಾವ್ಯಾವ ಬಾಣಗಳನ್ನು ಬಿಡಲು ಸಾಧ್ಯವೋ ಆ ಎಲ್ಲಾ ಬಾಣಗಳನ್ನು ಹೂಡಲು ಸಿದ್ಧವಾಗಿದೆ.

ಬಿಹಾರದ ರಾಜಕಾರಣವು ದಶಕಗಳಿಂದ ಜಾತಿ ಆಧಾರಿತ ಮೈತ್ರಿಗಳ ಮೇಲೆ ನಿಂತಿರುವುದು ಗೊತ್ತೇ ಇದೆ. ಯಾದವ, ಕುರ್ಮಿ, ಭೂಮಿಹಾರ್, ರಜಪೂತ ಮತ್ತು ಕಾಯಸ್ಥರಂತಹ ಸಮುದಾಯಗಳ ಒಲ್ಮೆಕೆಯೇ ಇಲ್ಲಿನ ಚುನಾವಣಾ ಫಲಿತಾಂಶವನ್ನು ನಿರ್ಧರಿಸುತ್ತದೆ. ಪ್ರಶಾಂತ್ ಕಿಶೋರ್ ಅವರು ಜಾತಿ ರಹಿತ ಮೆರಿಟೋಕ್ರಸಿ ಬಗ್ಗೆ ಮಾತನಾಡುತ್ತಿದ್ದರೂ, ಬಿಹಾರದ ಮತದಾರರ ಮನಸ್ಥಿತಿಯು ಈ ಸಿದ್ಧಾಂತಕ್ಕೆ ಎಷ್ಟು ಒಗ್ಗಿಕೊಳ್ಳುತ್ತದೆ ಎಂಬುದೇ ಈಗ ದೊಡ್ಡ ಪ್ರಶ್ನೆ. ಯುವಕರು ಮತ್ತು ಮೊದಲ ಬಾರಿಯ ಮತದಾರರು ಬದಲಾವಣೆಯನ್ನು ಬಯಸುತ್ತಿದ್ದರೂ, ಹಿರಿಯ ತಲೆಮಾರಿನ ಮತದಾರರು ಇಂದಿಗೂ ಜಾತಿ ಸಮೀಕರಣಗಳನ್ನೇ ನಂಬಿದ್ದಾರೆ. ಹೀಗಾಗಿ, ಜನ್ ಸುರಾಜ್ ಪಾರ್ಟಿಗೆ ಬಾಂಕಿಪುರದಲ್ಲಿ ಗೆಲ್ಲಬೇಕೆಂದರೆ, ಕೇವಲ ಸಿದ್ಧಾಂತವಲ್ಲದೆ, ತಳಮಟ್ಟದ ಸಂಘಟನೆ ಮತ್ತು ಸಾಮಾಜಿಕ ಸಮೀಕರಣಗಳನ್ನು ದಾಟುವ ಸಾಮರ್ಥ್ಯದ ಅಗತ್ಯವಿದೆ.

ತೇಜ್ ಪ್ರತಾಪ್ ಯಾದವ್ ಅವರ ಜನ್‌ಶಕ್ತಿ ಜನತಾ ದಳ ಮೀನಾ ಮಾನವಿಯನ್ನು ಕಣಕ್ಕಿಳಿಸಿರುವುದು ಈ ಚುನಾವಣೆಗೆ ಹೊಸ ಟ್ವಿಸ್ಟ್ ನೀಡಿದೆ. ವಿರೋಧ ಪಕ್ಷಗಳ ಮತಗಳು ಹಂಚಿ ಹೋದರೆ, ಅದು ಪರೋಕ್ಷವಾಗಿ ಬಿಜೆಪಿಯ ಗೆಲುವಿಗೆ ಹಾದಿ ಸುಗಮಗೊಳಿಸುತ್ತದೆ. ಪ್ರಶಾಂತ್ ಕಿಶೋರ್ ಅವರು ಪ್ರಬಲವಾಗಿ ಹೋರಾಡಿದರೂ, ಸಣ್ಣಪುಟ್ಟ ಪಕ್ಷಗಳ ಈ ಅಭ್ಯರ್ಥಿಗಳ ಕಾರಣದಿಂದ ಮತಗಳು ಚದುರಿದರೆ, ಅದು ಜನ್ ಸುರಾಜ್‌ನ ಮತಗಳಿಕೆಯ ಮೇಲೆ ಪರಿಣಾಮ ಬೀರಲಿದೆ. ಮತದಾರರ ಗಮನವನ್ನು ಬೇರೆಡೆ ಸೆಳೆಯಲು ಪ್ರಯತ್ನಿಸುತ್ತಿರುವ ಈ ಸಣ್ಣ ಪಕ್ಷಗಳ ನಡುವೆ, ಕಿಶೋರ್ ಅವರು ತಮ್ಮ ಸಂಘಟನಾ ಬಲವನ್ನು ಹೇಗೆ ಪ್ರದರ್ಶಿಸುತ್ತಾರೆ ಎಂಬುದು ಗಮನಾರ್ಹ.

ಸುರಾಜ್ ಪಾರ್ಟಿ ಅಧಿಕೃತವಾಗಿ ತನ್ನ ಅಭ್ಯರ್ಥಿಯನ್ನು ಘೋಷಿಸಲಿದೆ. ಪ್ರಶಾಂತ್ ಕಿಶೋರ್ ಅವರು, ಈ ಮಹಾತ್ವಾಕಾಂಕ್ಷೆಯ ಅಗ್ನಿಪರೀಕ್ಷೆಯಲ್ಲಿ ಗೆದ್ದರೆ, ಅದು ಬಿಹಾರದಲ್ಲಿ ಮೂರನೇ ಶಕ್ತಿಯ ಉದಯಕ್ಕೆ ಮತ್ತು ಪರ್ಯಾಯ ರಾಜಕಾರಣದ ಆರಂಭಕ್ಕೆ ಸಾಕ್ಷಿಯಾಗಲಿದೆ. ಸೋತರೆ, ಅದು ರಾಜಕೀಯ ತಂತ್ರಗಾರನೊಬ್ಬ ಜನನಾಯಕನಾಗಿ ಬದಲಾಗಲು ನಡೆಸುವ ಪ್ರಯೋಗಗಳ ಮಿತಿಗಳನ್ನು ತೋರಿಸಿಕೊಡಲಿದೆ. ಆ.3 ರಂದು ಹೊರಬೀಳುವ ಫಲಿತಾಂಶವು ಬಿಹಾರದ ಮತದಾರರು ಬದಲಾವಣೆಯನ್ನು ಆಶಿಸುತ್ತಿದ್ದಾರೋ ಅಥವಾ ಪಾರಂಪರಿಕ ರಾಜಕಾರಣವನ್ನೇ ಮುಂದುವರಿಸಲು ಬಯಸುತ್ತಾರೋ ಎಂಬುದನ್ನು ಸ್ಪಷ್ಟಪಡಿಸಲಿದೆ.

ಜುಲೈ 30ರಂದು ನಡೆಯಲಿರುವ ಮತದಾನವು ಬಿಹಾರದ ಭವಿಷ್ಯದ ರಾಜಕೀಯ ದಿಕ್ಕನ್ನು ನಿರ್ಧರಿಸಲಿದೆ! ಇಲ್ಲಿನ ಪ್ರತಿಯೊಂದು ಮತವೂ ಬಿಹಾರದ ಭವಿಷ್ಯದ ಆಡಳಿತ ಮಾದರಿಯನ್ನು ನಿರ್ಧರಿಸುವ ಶಕ್ತಿ ಹೊಂದಿದೆ. ಪ್ರಶಾಂತ್ ಕಿಶೋರ್ ಸೃಷ್ಟಿಸಿರುವ ಈ ರಾಜಕೀಯ ತಂತ್ರವು ಬಿಜೆಪಿಯಂತಹ ದೈತ್ಯ ಪಕ್ಷವನ್ನು ಎದುರಿಸಲು ಹೇಗೆ ಸಜ್ಜಾಗಿದೆ ಎಂಬುದನ್ನು ಇಡೀ ದೇಶ ಕುತೂಹಲದಿಂದ ಗಮನಿಸುತ್ತಿದೆ. ಈ ಅಗ್ನಿಪರೀಕ್ಷೆಯಲ್ಲಿ ಗೆದ್ದವನೇ ನಿಜವಾದ ಬಿಹಾರದ ಭವಿಷ್ಯದ ರೂವಾರಿ ಎನ್ನುತ್ತಿದ್ದಾರೆ ರಾಜಕೀಯ ವಿಶ್ಲೇಷಕರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR